ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 129
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಮಂಗಳವಾರ: 28-04-2026

# ಮುಖ್ಯಮಂತ್ರಿ ಕುರ್ಚಿಗಾಗಿ ಕಚ್ಚಾಟ
## ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಟೀಕೆ

**ಕುಣಿಗಲ್, ಏ.27–** ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ಕಿತ್ತಾಟ ನಡೆಯುತ್ತಿದ್ದು, ಒಬ್ಬರು ನಾನೇ ಐದು ವರ್ಷ ಸಿ.ಎಂ ಎನ್ನುತ್ತಾರೆ. ಮತ್ತೊಬ್ಬರು ನನಗೆ ಎರಡೂವರೆ ವರ್ಷ ನಿಗದಿಯಾಗಿತ್ತು ಎನ್ನುತ್ತಾರೆ. ಪ್ರತಿನಿತ್ಯ ಇದನ್ನು ಬಿಟ್ಟರೆ ರಾಜ್ಯದಲ್ಲಿ ಯಾವ ಸಮಸ್ಯೆ ಚರ್ಚೆಯಾಗುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟೀಕಿಸಿದರು.

ತಾಲ್ಲೂಕಿನ ಹುಲಿಯೂರುದುರ್ಗ ವ್ಯಾಪ್ತಿಯ ಮಾದಪ್ಪನಹಳ್ಳಿ ಗ್ರಾಮದಲ್ಲಿ ಶ್ರೀ ವೆಂಕಟೇಶ್ವರ ಸ್ವಾಮಿ ದೇವಾಲಯ ಉದ್ಘಾಟನಾ ಸಮಾರಂಭದಲ್ಲಿ ಭಾಗಿಯಾದ ಬಳಿಕ ಮಾತನಾಡಿದ ಅವರು, ಇತ್ತೀ?ಚೆಗೆ ಅಲ್ಲಲ್ಲಿ ಆಲಿಕಲ್ಲು ಮಳೆ ಬಿದ್ದು ಹಲವಾರು ಭಾಗದಲ್ಲಿ ಬಾಳೆ, ದ್ರಾಕ್ಷಿ, ದಾಳಿಂಬೆ ಬೆಳೆ ನಾಶವಾದರೂ ಯಾವುದರ ಬಗ್ಗೆಯೂ ಗಮನ ಹರಿಸುತ್ತಿಲ್ಲ ಎಂದು ಆರೋಪಿಸಿದರು.

ರಾಜ್ಯದಲ್ಲಿ ಅಪರಾಧ ಮತ್ತು ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿದ್ದರೂ ಯಾವುದೇ ಕ್ರಮ ಇಲ್ಲದಂತಾಗಿದೆ. ನನಗೆ ಬೇರೆ ಯಾವುದೇ ವ್ಯಾಮೋಹವಿಲ್ಲ ನಿಮ ಆಶಿರ್ವಾದವಿದ್ದರೆ ಗ್ರಾಮೀಣ




ಭಾಗದ ಜನರ ಬದುಕನ್ನು ಸರಿಪಡಿಸಬೇಕೆಂಬುದೇ ನನ್ನ ಗುರಿಯಾಗಿದೆ. ನಮ ದೇಶ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಆರ್ಥಿಕತೆಯಲ್ಲಿ ವಿಶ್ವದಲ್ಲೆ ಮೂರನೇ ಸ್ಥಾನದಲ್ಲಿದೆ ಎಂದು ಅವರು ಹೇಳಿದರು.

ನಿಮೆಲ್ಲರ ಆಶೀರ್ವಾದದಿಂದ ನಾನು ಕೇಂದ್ರ ಸಚಿವನಾಗಿದ್ದೇನೆ. ಉದ್ಯೋಗ, ಸಹಕಾರ ಕೇಳಿಕೊಂಡು ಪ್ರತಿನಿತ್ಯ ನನ್ನನ್ನು ನೋಡಲು ತಮ ಕಷ್ಟ ಹೇಳಿಕೊಳ್ಳಲು ನೂರಾರು ಮಂದಿ ಬರುತ್ತಾರೆ. ನನಗೆ ನರೇಂದ್ರ ಮೊದಿಯವರು ದೊಡ್ಡ ಜವಾಬ್ದಾರಿ ನೀಡಿದ್ದಾರೆ. ಪ್ರತಿ ರಾಜ್ಯಕ್ಕೂ ಬೇಟಿ ನೀಡಿದ್ದೇನೆ. ಬಡತನ ಎಂಬುದು ಇನ್ನೂ ನಿವಾರಣೆಯಾಗಿಲ್ಲ, ಒಂದು ಕಡೆ ಶ್ರೀಮಂತ ವರ್ಗ ಇದ್ದರೆ, ಮತ್ತೊಂದು ಕಡೆ ಬಡ ವರ್ಗದವರು ಇದ್ದಾರೆ. ಇದನ್ನೆಲ್ಲಾ ನೋಡಿದರೆ ಬಡತನ ನಿವಾರಣೆಯಾಗಿಲ್ಲ ಎಂಬ ಜಿಗುಪ್ಸೆಯಾಗುತ್ತದೆ ಎಂದರು. ಆಕಸಿಕವಾಗಿ ರಾಜಕೀಯಕ್ಕೆ ಬಂದಿದ್ದೇನೆ. ನಿಮಗಳ ಸೇವೆ ಮಾಡಲು ಐದು ಬಾರಿ ನನಗೆ ದೇವರು ಮರುಜನ ನೀಡಿದ್ದಾನೆ.

ಚುನಾವಣಾ ಆಯೋಗದವರು ಸುಪ್ರಿ?ಂ ಕೋರ್ಟ್ ಮುಂದೆ ಚುನಾವಣೆಯನ್ನು ಮುಂದೂಡುವಂತೆ ಮನವಿ ಸಲ್ಲಿಸಿದ್ದಾರೆ. ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆದು ಈಗಾಗಲೇ ಐದು, ಹತ್ತು ವರ್ಷ ಕಳೆದು ಹೋಗಿದೆ. ಚುನಾವಣೆ ನಡೆಸಲು ಹಣವಿಲ್ಲದ ಕಾರಣ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಮುಂದೂಡಲಾಗಿದೆ ಎಂದು ಅವರು ಆರೋಪಿಸಿದರು. ಚುನಾವಣಾ ಆಯೋಗ ಸುಪ್ರಿಂ ಕೋರ್ಟ್‌ಗೆ ಸೆಪ್ಟೆಂಬರ್ ತಿಂಗಳವರೆಗೆ ಚುನಾವಣೆಗನ್ನು 2ನೇಪುಟಕ್ಕೆ

# ಮಹಿಳೆಯರಿಗೆ ನೌಕರಿ ಆಮಿಷ ತೋರಿಸಿ ವೇಶ್ಯಾವಾಟಿಕೆ ಜಾಲ ಬಯಲು



ಧೈರ್ಯದ ದಾರಿ

**ಮಾನ್ವಿ :** ಕೆಲಸ ಕೊಡಿಸುವ ಆಮಿಷವೊಡ್ಡಿ ಮಹಿಳೆಯರನ್ನು ವೇಶ್ಯಾವಾಟಿಕೆಗೆ ದೂಡುತ್ತಿದ್ದ ಅಕ್ರಮ ಜಾಲವನ್ನು ಮಾನ್ವಿ ಪೊಲೀಸರು ಬಯಲಿಗೆಳೆದಿದ್ದಾರೆ ಎಂದು ಡಿಎಸ್ಪಿ ಚಂದ್ರಶೇಖರ್ ನಾಯಕ್ ತಿಳಿಸಿದ್ದಾರೆ. ಹಿರೇ ಕೊಟ್ಟಿಕಲ್ ಬ್ಯಾಗವಾಟ್ ರಸ್ತೆಯ ಕೆನಾಲ್ ಸಮೀಪದ ಹೊಲದಲ್ಲಿ ನಡೆಯುತ್ತಿದ್ದ ದಂಧೆಯ ಮೇಲೆ ಶನಿವಾರ ರಾತ್ರಿ ದಾಳಿ ನಡೆಸಿ ಕಿಂಗ್‌ಪಿನ್ ತಾಯಪ್ಪ ಸೇರಿದಂತೆ ಒಟ್ಟು 11 ಆರೋಪಿಗಳನ್ನು ಬಂಧಿಸಲಾಗಿದೆ ಎಂದರು.

ಕೆಲಸದ ಹುಡುಕಾಟದಲ್ಲಿದ್ದ ಬಡ ಹಾಗೂ ಮಧ್ಯಮ ವರ್ಗದ ಮಹಿಳೆಯರನ್ನು ಗುರಿಯಾಗಿಸಿಕೊಂಡು ಹೆಚ್ಚಿನ ಸಂಬಳದ ಉದ್ಯೋಗ ಕೊಡಿಸುವುದಾಗಿ ನಂಬಿಸಿ, ಬಳಿಕ ಅವರನ್ನು ವೇಶ್ಯಾವಾಟಿಕೆಗೆ ದೂಡುತ್ತಿದ್ದ ಜಾಲ ಇದಾಗಿದ್ದು, ಖಚಿತ ಮಾಹಿತಿಯ ಆಧಾರದ ಮೇಲೆ ಪೊಲೀಸರು ದಾಳಿ ನಡೆಸಿ ಇಬ್ಬರು ಸಂತ್ರಸ್ತೆಯರನ್ನು ರಕ್ಷಿಸಿ ಸಾಂತ್ವನ ಕೇಂದ್ರಕ್ಕೆ ಕಳುಹಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಾಚರಣೆಯಲ್ಲಿ ಪಿ.ಐ ಸೋಮಶೇಖರ ಎಸ್ ಕೆಂಚರೆಡ್ಡಿ, ಪಿಎಸ್ಐ ಅಜೀರ್, ಎ.ಎಸ್.ಐ ಹನುಮೇಶ್, ಹುಸೇನ್ ಸಾಬ್, ಬಸನಗೌಡ, ಸೂಗಪ್ಪ, ಚರಣ, ಪ್ರಕಾಶ್ ಸೇರಿದಂತೆ ಮಾನ್ವಿ ಪೊಲೀಸ್ ಠಾಣೆಯ ಕ್ರೈಂ ಬ್ರಾಂಚ್ ತಂಡ ಭಾಗವಹಿಸಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಸಾರ್ವಜನಿಕರು ಯಾವುದೇ ಜ್ವರವಿರಲಿ, ತಕ್ಷಣ ರಕ್ತಲೇಪನ ಪರೀಕ್ಷೆ ಮಾಡಿಸಿ, ಮಲೇರಿಯಾ ತಡೆಗೆ ಸಹಕರಿಸಿ: ಡಾ.ಶಾಕೀರ್




ಧೈರ್ಯದ ದಾರಿ

**ರಾಯಚೂರು:** ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಾಧ್ಯವಾಗುವುದು ಎಂಬುದನ್ನು ವ್ಯಾಪಕ ಜನಜಾಗೃತಿಗಾಗಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಹಾಗೂ ಪಾಲಿಕೆ ಆರೋಗ್ಯಾಧಿಕಾರಿ ಡಾ ಮಹಮ್ಮದ್ ಶಾಕೀರ್ ಮನವಿ ಮಾಡಿದರು.

ಇತ್ತೀಚೆಗೆ ನಗರದ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ರಾಯಚೂರು ಇವರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ಮಲೇರಿಯಾ ದಿನದ ಜಾಗೃತಿ ಕಾರ್ಯಕ್ರಮದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಎಲ್ಲ ಪ್ರದೇಶಗಳಲ್ಲಿ ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ. ನೀರು ನಿಲ್ಲದಂತೆ ನಿಗಾ ವಹಿಸಲು ಜನತೆಗೆ ಜಾಗೃತಿ ನೀಡಲು ತಿಳಿಸಿದರು. ಮುಖ್ಯವಾಗಿ ಮಲೇರಿಯಾ ಹರಡುವ ಅನಾಫಿಲಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರ್ತಿಸುವುದು, ಕೀಟ ನಾಶಕ ಸಿಂಪರಣೆಗೆ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಜಿಲ್ಲಾ ಡಿಪಿಡಿಓ ಡಾ ಚಂದ್ರಶೇ ಖರಯ್ಯ ಸ್ವಾಮಿ ಅವರು ಮಾತನಾಡಿ, ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗಬಹು ದಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ ಎಂದರು.

ಮಲೇರಿಯಾ ರೋಗ ಲಕ್ಷಣಗಳು: ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಲಕ್ಷಣಗಳಾಗಿವೆ. ಈ ಲಕ್ಷಣಗಳು ಕಂಡು ಬಂದಲ್ಲಿ ಮಲೇರಿಯಾ ಜ್ವರ ಇರಬಹುದು ಎಂದು ಭಾವಿಸಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಲೇಪನ ಪರೀಕ್ಷೆಗೆ ಒಳಪಟ್ಟು ಖಚಿತಪಟ್ಟಲ್ಲಿ ಸೂಕ್ತ ಉಚಿತ ಚಿಕಿತ್ಸೆ ಪಡೆದು ಗುಣ ಹೊಂದಬಹುದಾಗಿದೆ ಎಂದು ಹೇಳಿದರು.

ನಿಯಂತ್ರಣಕ್ಕೆ ಸಹಕಾರ: ಮಲೇರಿಯಾ ಪ್ರಕರಣಗಳ ತಡೆಗೆ ಮನೆಯ ಒಳಭಾಗ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಸಹಕರಿಸಬೇಕು. ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆ ಬಳಕೆ ಮಾಡಬೇಕು. ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು. ಆರೋಗ್ಯ ಇಲಾಖೆಯಿಂದ ನೀಡಲ್ಪಡುವ ಲಾರ್ವಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ ಪಡೆಯಬಹುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಪರಿಸರ ಅಭಿಯಂತರರು ಜಯಪಾಲ ರೆಡ್ಡಿ, ಬಿಹೆಚ್ಇಓ ಸರೋಜಾ ಕೆ, ಎಮ್‌ಟಿಎಸ್ ಸಂಧ್ಯಾ ಸೇರಿದಂತೆ ಮಹಾನಗರ ಪಾಲಿಕೆ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಯವರು ಇದ್ದರು.

# ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ. ಸಲಹೆ

* ನಿರಂತರ ಅಧ್ಯಯನಶೀಲರಾಗಿ * ಸತತ ಪ್ರಯತ್ನವೇ ಸಾಧನೆಗೆ ಮಾರ್ಗ * ಎಸ್.ಎಸ್.ಎಲ್.ಸಿ.ಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ



ಧೈರ್ಯದ ದಾರಿ



**ರಾಯಚೂರು:** ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾದಾಗ ಮಾತ್ರ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಉನ್ನತ ಜೀವನ ನಡೆಸಲು ಸಹಕಾರಿಯಾಗುತ್ತದೆ ಎಂದು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಏಪ್ರಿಲ್ 27ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವಿಶೇಷ ಸನ್ಮಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ. ಫಲಿತಾಂಶವನ್ನು ಹೆಚ್ಚಿಸಲು ಜಿಲ್ಲೆಯ ಜಿಲ್ಲಾ ಮಟ್ಟದಿಂದ ಗ್ರಾಮೀಣ ಮಟ್ಟದವರೆಗೂ ವಿಶೇಷವಾದ ತಂಡಗಳನ್ನು ರಚಿಸಲಾಗಿತ್ತು. ಜೊತೆಗೆ ಪ್ರತಿ ತಾಲೂಕಿಗೆ ನೋಡೆಲ್ ಅಧಿಕಾರಿಗಳನ್ನು ನೇಮಕ ಮಾಡಿ, ಅಭ್ಯಾಸದಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ, ಅವರಿಗೆ ವಿಶೇಷವಾದ ಕಲಿಕಾ ಚಟುವಟಿಕೆಗಳನ್ನು ನಡೆಸಿ, ಜಿಲ್ಲೆಯ ಫಲಿತಾಂಶವನ್ನು ಸುಧಾರಿಸಲಾಗಿದೆ. ಮತ್ತು ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಉತ್ತೀಣಗೊಳಿಸುವ ನಿಟ್ಟನಲ್ಲಿ ಶಿಕ್ಷಕರು, ಶಿಕ್ಷಣ ಇಲಾಖೆಯ ಅಧಿಕಾರಿಗಳು ಅತ್ಯಂತ ಹೆಚ್ಚಿನ ಶ್ರಮ ವಹಿಸಿ ಕಾರ್ಯ ನಿರ್ವಹಿಸಿದ್ದಾರೆ ಎಂದರು.

ರಾಜ್ಯಕ್ಕೆ 21ನೇ ಸ್ಥಾನದಲ್ಲಿದ್ದೇವೆ ಎಂದು ನಮ್ಮನ್ನು ನಾವು ಬೆನ್ನು ತಟ್ಟಿಕೊಳ್ಳದೇ, ಜಿಲ್ಲೆಯ ಶೈಕ್ಷಣಿಕ ಪರಿಸ್ಥಿತಿಯನ್ನು ಸುಧಾರಿಸಲು ಇಂದಿನಿಂದಲೇ ರೂಪು ರೇಷೆಗಳನ್ನು ಹಾಕಿಕೊಳ್ಳಬೇಕಾಗಿದೆ. ಅದಕ್ಕಾಗಿ ಪ್ರತಿಯೊಬ್ಬ ವಿದ್ಯಾರ್ಥಿಗೆ ಶೈಕ್ಷಣಿಕ ಪ್ರೋತ್ಸಾಹ ನೀಡುವುದು ಅತ್ಯಗತ್ಯವಾಗಿದೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೇ ನಮ್ಮಲ್ಲಿ ಶಿಕ್ಷಕರ ಕೊರತೆ ಇದ್ದು, ಈ ಸವಾಲಿನ ಮಧ್ಯೆಯೂ ಈ ಬಾರಿ ಶೈಕ್ಷಣಿಕ ಪ್ರಗತಿಯನ್ನು ಉತ್ತಮವಾಗಿ ಸಾಧಿಸಿದ್ದೇವೆ. ಇದೇ ರೀತಿ ನಿರಂತರವಾಗಿ ಶೈಕ್ಷಣಿಕ ಪ್ರಗತಿ ಹೆಚ್ಚಳಕ್ಕೆ ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದರು. ಎಸ್.ಎಸ್.ಎಲ್.ಸಿ. ಎಂದರೇ ಕೇವಲ ಪ್ರೌಢ ಶಿಕ್ಷಕ್ಕೆ ಮಾತ್ರ ಸೀಮಿತವಾಗಿರುವುದಿಲ್ಲ. ಇದು ಮುಂದಿನ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ಸಹಕಾರಿಯಾಗುತ್ತದೆ. ಎಸ್.ಎಸ್.ಎಲ್.ಸಿಯಲ್ಲಿ ವಿದ್ಯಾರ್ಥಿಗಳು ಕಷ್ಟ ಪಟ್ಟು ಅಭ್ಯಾಸ ಮಾಡಿದರೆ ಮುಂದಿನ ಭವಿಷ್ಯ ಉತ್ತಮವಾಗಿರುತ್ತದೆ ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗೆ ಶತೃವೆಂದರೇ ಅದು ಮೊಬೈಲ್ ಫೋನ್ ಆಗಿದ್ದು, ಅದನ್ನು ಒಳ್ಳೆ ಕೆಲಸಗಳಿಗೆ ಮತ್ತು ಶಿಕ್ಷಣದ ವಿಚಾರವಾಗಿ ಬಳಸಿದರೇ ಮಾತ್ರ ಉಪಯೋಗವಾಗುತ್ತದೆ. ಕೇವಲ ಸಾಮಾಜಿಕ ಜಾಲತಾಣದಲ್ಲಿ ಕಾಲಕಳೆಯುವುದರಿಂದ ಸಮಯವೂ ವ್ಯರ್ಥವಾಗುತ್ತದೆ ಎಂದರು.

ವಿದ್ಯಾರ್ಥಿಗಳ ಪಾಲಕರ ಪರಿಶ್ರಮಕ್ಕೆ ಪ್ರತಿಫಲವೆಂದರೇ ಅದು ವಿದ್ಯಾರ್ಥಿ ಉತ್ತಮ ಫಲಿತಾಂಶವನ್ನು ತೆಗೆವುದು ಮಾತ್ರ ಆಗಿರುತ್ತದೆ. ಶಿಕ್ಷಣ ಇಲಾಖೆ ಈ ಬಾರಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದು, ಇದೀಗ ಶಿಕ್ಷಣ ಇಲಾಖೆಯ ಜವಾಬ್ದಾರಿ ಇನ್ನೂ ಹೆಚ್ಚಾಗಿದ್ದು, ನಿರಂತರ ಶ್ರಮದಿಂದ ಕಾರ್ಯ ನಿರ್ವಹಿಸುವ ಮೂಲಕ ರಾಜ್ಯದಲ್ಲಿ ಇನ್ನೂ ಉನ್ನತ ಸ್ಥಾನಕ್ಕೆ ತಲುಪಬಹುದು, ಮುಂದಿನ ದಿನಗಳಲ್ಲಿ ಇದೇ ರೀತಿ ಶ್ರಮವಹಿಸಿ ಕೆಲಸ ಮಾಡಿದರೇ ಮೊದಲನೇ ಸ್ಥಾನಕ್ಕೆ ಬರುವುದರಲ್ಲಿ ಸಂದೇಹವೇ ಇಲ್ಲ ಎಂದು ಹೇಳಿದರು.

**ವಿದ್ಯಾರ್ಥಿಗಳಿಗೆ ಸನ್ಮಾನ:** ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ. ಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಜಿಲ್ಲೆಯ ಮಾನ್ವಿ ತಾಲೂಕಿನ ಸುಖದೇವ (625), ಸಿಂಧನೂರಿನ ನಿಖಿಲ್ ಮೇಟಿ (622), ಲಿಂಗಸುಗೂರಿನ ಪ್ರವೀಣ್ (622), ದೇವದುರ್ಗದ ಮಲ್ಲಿಕಾರ್ಜುನ ಸ್ವಾಮಿ (622) ಹಾಗೂ ರಾಯಚೂರಿನ ಸೌಮ್ಯ ಪ್ಯಾಟಿ (619) ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ವಿದ್ಯಾರ್ಥಿಗಳ ಅನಿಸಿಕೆ: ಎಸ್.ಎಸ್.ಎಲ್.ಸಿ.ಪರೀಕ್ಷೆಯಲ್ಲಿ 625ಕ್ಕೆ 625 ಅಂಕಗಳನ್ನು ಪಡೆದು, ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವ ಜಿಲ್ಲೆಯ ಮಾನ್ವಿಯ ಬಿವಿಆರ್ ಪ್ರೌಢ ಶಾಲೆಯ ವಿದ್ಯಾರ್ಥಿ ಸುಖದೇವ ಅವರು ಮಾತನಾಡಿ, ಐಐಟಿ ಪದವಿ ಪಡೆದು ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡುವ ಗುರಿ ಇದೆ. ಇನ್ನೂ ಹೆಚ್ಚಿನ ಮಟ್ಟದಲ್ಲಿ ಸಾಧನೆ ಮಾಡುವ ಆಶೆ ಇದೆ ಎಂದರು.

ನನ್ನ ಈ ಸಾಧನೆಗೆ ತಂದೆ–ತಾಯಿ ಹಾಗೂ ಶಿಕ್ಷಕರ ಪಾತ್ರ ಹೆಚ್ಚಾಗಿದೆ. ಜಿಲ್ಲಾಡಳಿತದಿಂದ ಸನ್ಮಾನಿಸಿದ್ದು, ಇನ್ನೂ ಹೆಚ್ಚಿನ ಸಾಧನೆ ಮಾಡಲು ಪ್ರೇರಣೆಯಾಗಿದೆ ಎಂದು ಶಕ್ತಿನಗರ ಕೆ.ಪಿ.ಸಿ.ಎಲ್ ಪ್ರೌಢ ಶಾಲೆಯ ವಿದ್ಯಾರ್ಥಿ ಸೌಮ್ಯ ಪ್ಯಾಟಿ ಅವರು ಅಭಿಪ್ರಾಯಪಟ್ಟರು. ಜಿಲ್ಲೆಯ ಮಾನ್ವಿಯ ಬಿವಿಆರ್ ಪ್ರೌಢ ಶಾಲೆಯ ವಿದ್ಯಾರ್ಥಿ ಸುಖದೇವ ಅವರಿಗೆ ಜಿಲ್ಲಾಧಿಕಾರಿಗಳಿಂದ 10 ಸಾವಿರ ರೂಪಾಯಿ ಚೆಕ್ ಅನ್ನು ವಿತರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ್, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಡಿ.ಬಡಿಗೇರ, ಅಭಿವೃದ್ಧಿ ವಿಭಾಗದ ಉಪ ನಿರ್ದೇಶಕ ಚಂದ್ರಶೇಖರ ಭಂಡಾರಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇತರರು ಇದ್ದರು.

ಮೊದಲನೇ ಪುಟದಿಂದ

# ಮುಖ್ಯಮಂತ್ರಿ ಕುರ್ಚಿಗಾಗಿ ಕಚ್ಚಾಟ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಟೀಕೆ

ಮುಂದೂಡುವಂತೆ ಅಫಿಡವಿಟ್ ಸಲ್ಲಿಸಿದೆ. ಕಾರಣ ರಾಜ್ಯದಲ್ಲಿ ಚುನಾವಣೆ ನಡೆಸಲು ಹಣವಿಲ್ಲದಂತಾಗಿದೆ. ಇತ್ತೀಚೇಗೆ ಸಂತೆಮಾವತ್ತೂರು ಗ್ರಾಮದಲ್ಲಿ ನಡೆದ ಚುನಾವಣೆ ಅಕ್ರಮದ ಬಗ್ಗೆ ಇದುವರೆಗೂ ಯಾವುದೇ ಕ್ರಮವಿಲ್ಲ. ನೀವು ಅಣ್ಣ–ತಮ್ಮಂದಿರು ಒಂದಾಗಿದ್ದರೆ, ಈ ಕೆಟ್ಟ ಪರಿಸ್ಥಿತಿ ಬರುತ್ತಿರಲಿಲ್ಲ.

ನೀವು ಬುದ್ಧಿವಂತರಾಗಿ ಒಳ್ಳೆಯವರನ್ನು ಆಯ್ಕೆ ಮಾಡಿ. ಮಾಜಿ ಸಚಿವ ಡಿ.ನಾಗರಾಜಯ್ಯ ಅವತ್ತು ಹೇಗಿದ್ದರೋ ಇವತ್ತೂ ಹಾಗೆ ಇದ್ದಾರೆ. ಯಾವುದೇ ಬದಲಾವಣೆ ಇಲ್ಲ. ನೀವಿಬ್ಬರೂ ಒಗ್ಗಟ್ಟಾಗಿ ಇದ್ದಿದ್ದರೆ ನಿಮ್ಮ ಕುಟುಂಬವನ್ನು ಯಾರೂ ಟಚ್ ಮಾಡಲು ಆಗುತ್ತಿರಲಿಲ್ಲ ಎಂದು ಡಿ.ನಾಗರಾಜಯ್ಯ ಹಾಗೂ ಡಿ.ಕೃಷ್ಣಕುಮಾರ್ ಸಹೋದರರಿಗೆ ಒಟ್ಟಾಗಿ ಕೆಲಸ ಮಾಡಿ ಎಂದು ಸಲಹೆ ಮಾಡಿದರು. ಇದೆ ವೇಳೆ ಸಂಸದ ಡಾ.ಸಿ.ಎನ್.ಮಂಜುನಾಥ್, ಶಾಸಕ ಮುನಿರತ್ನ, ಮಾಜಿ ಸಚಿವ ಡಿ.ನಾಗರಾಜಯ್ಯ, ಬಿಜೆಪಿ ಮುಖಂಡ ಡಿ.ಕೃಷ್ಣಕುಮಾರ್ ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ವಿವಿಧ ವಾರ್ಡಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಪರಿಶೀಲಿಸಿದ ಸಚಿವ ಎನ್.ಎಸ್,ಬೋಸರಾಜು



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿನ ವಿವಿಧ ವಾರ್ಡಗಳಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ತೀವ್ರ ವ್ಯಾತ್ಯಯವಾಗುತ್ತಿದ್ದು ಸಾರ್ವಜನಿಕರಿಂದ ತೀವ್ರ ಪ್ರತಿಭಟನೆ ಹಿನ್ನೆಲೆಯಲ್ಲಿ ರಾಜ್ಯ ಸಣ್ಣ ನೀರವಾರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಪಟ್ಟಣದ ವಿವಿಧ ವಾರ್ಡಗಳಲ್ಲಿ ಕೈಗೊಳ್ಳಲಾದ ಅಮೃತ –2 ಕುಡಿಯುವ ನೀರಿನ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿದರು.

ಪಟ್ಟಣದ ವಾಲ್ಮೀಕಿ ಮಾಹಾರ್ಷಿಗಳ ವೃತ್ತದಲ್ಲಿ ಪೈಪಲೈನ್ ಕಾಮಗಾರಿ ಸ್ಥಳದಲ್ಲಿ ಕರ್ನಾಟಕ ಕುಡಿಯುವ ನೀರು ಸರಬರಾಜು ಮಂಡಳಿಯ ಕಾರ್ಯನಿರ್ವಹಕ ಅಧಿಕಾರಿ ಗುರುರಾಜರವರೊಂದಿಗೆ ಮಾತನಾಡಿ ಪಟ್ಟಣದಲ್ಲಿ ಬೇಸಿಗೆ ಹಿನ್ನೇಲೆಯಲ್ಲಿ ಕುಡಿಯುವ ನೀರಿನ ತೊಂದರೆ ತೀವ್ರವಾಗಿದು ವಾರ್ಡ ಸಂಖ್ಯೆ 18,19,20,26,27,25, ರಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ತೊಂದರೆಯಾಗುತ್ತಿದೆ. ನೀವು ಕಾಮಗಾರಿ ಕೈಗೊಳ್ಳುವಲ್ಲಿ ವಿಳಂಬ ಮಾಡುತ್ತಿರುವುದರಿಂದ ಸಾರ್ವಜನಿಕರು ಸರಕಾರದ ವಿರುದ್ದ ಅಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಕೂಡಲೇ ಗುತ್ತಿಗೆದಾರರಿಗೆ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆ ಮಾಡುವುದಕ್ಕೆ ಕ್ರಮ ಕೈಗೊಳ್ಳುವಂತೆ ತಾಲೂಕು ಕುಡಿಯುವ ನೀರು ನೈರ್ಮಲ್ಯ ಇಲಾಖೆ ಅಧಿಕಾರಿ ಚೌಹಾಣ್, ಗುತ್ತೆದಾರರಾದ ಗೌರವ್ ಹಾಗೂ ಜ್ಞಾನೇಂದ್ರ , ಜೆಸ್ಕಾಂ ಇಲಾಖೆಯ ಕಾರ್ಯನಿರ್ವಹಕ ಅಧಿಕಾರಿ ಮೋಹನ್ ರವರಿಗೆ ಸೂಚಿಸಿದರು.

ಶಾಸಕ ಹಂಪಯ್ಯನಾಯಕ ಮಾತನಾಡಿ ಮಾನ್ವಿ ಪಟ್ಟಣದಲ್ಲಿ ಪುರಸಭೆಯಿಂದ ಸಮಾರ್ಪಕವಾಗಿ ಕುಡಿಯುವ ನೀರು ಪೂರೈಸುವಲ್ಲಿ ವಿಫಲರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವಂತೆ ಸರಕಾರಕ್ಕೆ ಪತ್ರ ಬರೆಯಲಾಗುವುದು.ಬೇಸಿಗೆ ಇರುವುದರಿಂದ ಜನರಿಗೆ ನೀರಿನ ತೊಂದರೆಯಾಗುತ್ತಿದೆ ಪುರಸಭೆ ನೀರು ಪೂರೈಕೆ ಸಿಬ್ಬಂದಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಗುತ್ತಿಗೆದಾರರು ಶಿಘ್ರವೇ ಕಾಮಗಾರಿ ಪೂರ್ಣಗೊಳಿಸಿ ಎಂದು ಸೂಚಿಸಿದರು.ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾನ್ವಿ ಮತ್ತು ಸಿರವಾರ ತಾಲೂಕುಗಳ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಸಚಿವ ಎನ್.ಎಸ್,ಬೋಸರಾಜು ಸೂಚಿಸಿದರು.

ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ ಸಾಬ್, ತಹಶೀಲ್ದಾರ್ ಭೀಮರಾಯ ರಾಮಸಮುದ್ರ , ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ, ಪಿ.ಐ.ಸೋಮಶೇಖರ್ ಎಸ್. ಕೆಂಚರೆಡ್ಡಿ ,ತಾ.ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಮುಖಂಡರಾದ ಸೈಯದ್ ಖಾಲಿದ್ ಖಾದ್ರಿ, ರಾಜಾ ಸುಭಾಶ್ಚಂದ್ರನಾಯಕ್, ಮಾಜಿ ಪುರಸಭೆ ಸದಸ್ಯರಾದ ಜಿಲಾನಿ ಖುರೇಶಿ ,ಹುಸೇನ್‌ಬೇಗ್, ರೇವಣಸಿದ್ದಯ್ಯ ಸ್ವಾಮಿ, ಎಚ್.ಬಿ.ಎಂ.ಭಾಷಾ, ಅಮ್ಜದ್ ಖಾನ್, ಮಾನ್ವಿ ಮತ್ತು ಸಿರವಾರ ತಾಲೂಕುಗಳ ಅಧಿಕಾರಿಗಳು ಭಾಗವಹಿಸಿದರು.

# ಸಿರವಾರದ ಸರ್ವಾಂಗೀಣ ಅಭಿವೃದ್ಧಿಗೆ ಬದ್ಧ: ಸಚಿವ ಎನ್.ಎಸ್. ಬೋಸರಾಜು

**3.85 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ; ಎಲ್ಲ ಸಮುದಾಯಗಳಿಗೂ ಅನುದಾನದ ಭರವಸೆ**

ಧೈರ್ಯದ ದಾರಿ



**ಸಿರವಾರ (ಏಪ್ರಿಲ್ 27):** "ಸಿರವಾರವು ತಾಲೂಕು ಕೇಂದ್ರವಾಗಿರುವುದರಿಂದ ಎಲ್ಲ ಸಮುದಾಯದ ಜನರ ಅನುಕೂಲಕ್ಕಾಗಿ ಹೆಚ್ಚಿನ ಅನುದಾನ ಬಳಸಿ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಲು ಪ್ರಯತ್ನಿಸುತ್ತಿದ್ದೇನೆ. ಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ನಾನು ಬದ್ಧನಾಗಿದ್ದೇನೆ," ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಹೇಳಿದರು.

ಪಟ್ಟಣದ ವಿವಿಧೆಡೆ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ 3.85 ಕೋಟಿ ರೂ. ಅಂದಾಜು ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶನಿವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

**ಸಚಿವರು ಪ್ರಮುಖವಾಗಿ ಈ ಕೆಳಗಿನ ಸಮುದಾಯ ಮತ್ತು ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಗೆ ಚಾಲನೆ ನೀಡಿದರು:**

**ಸಮುದಾಯ ಭವನಗಳು:** ಕಮ್ಮ ಸಮುದಾಯ, ಗಂಗಾಮತಸ್ಥ ಸಮುದಾಯ, ಹಡಪದ ಅಪ್ಪಣ್ಣ ಸಮಾಜ, ಸವಿತಾ ಸಮಾಜ ಹಾಗೂ ವಿಶ್ವಕರ್ಮ ಸಮುದಾಯಗಳ ಭವನ ನಿರ್ಮಾಣ.

ಧಾರ್ಮಿಕ ಕೇಂದ್ರಗಳು: ವೆಂಕಟೇಶ್ವರ ದೇವಸ್ಥಾನ, ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ, ಅಂಬಾದೇವಿ ಮಠ, ಈಶ್ವರ ಮತ್ತು ವೀರಭದ್ರೇಶ್ವರ ದೇವಸ್ಥಾನಗಳ ಅಭಿವೃದ್ಧಿ, ಚರ್ಚ್ ಅಭಿವೃದ್ಧಿ ಹಾಗೂ ಗದ್ದಗಿಮಠದ ಕಾಂಪೌಂಡ್ ವಾಲ್ ನಿರ್ಮಾಣ.

ಇತರ: ಶಾದಿ ಮಹಲ್ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ.

"ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಗುಣಮಟ್ಟದ ಕಾಮಗಾರಿ ಮುಗಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಸಾರ್ವಜನಿಕರು ಸಹ ಅಭಿವೃದ್ಧಿ ಕೆಲಸಗಳಿಗೆ ಸಹಕರಿಸಬೇಕು. ಮುಂದಿನ ದಿನಗಳಲ್ಲಿ ಉಳಿದ ಸಮುದಾಯಗಳಿಗೂ ಅನುದಾನ ನೀಡಲಾಗುವುದು," ಎಂದು ಸಚಿವರು ಭರವಸೆ ನೀಡಿದರು.

ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ: ಶಾಸಕ ಹಂಪಯ್ಯ ನಾಯಕ

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಶಾಸಕ ಜಿ. ಹಂಪಯ್ಯ ನಾಯಕ ಮಾತನಾಡಿ, "ಸಚಿವರ ಮಾರ್ಗದರ್ಶನದಲ್ಲಿ ಕ್ಷೇತ್ರದಾದ್ಯಂತ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನ ತರಲಾಗುವುದು," ಎಂದರು.

ಈ ಸಂದರ್ಭದಲ್ಲಿ ಚುಕ್ಕಿ ಸೂಗಪ್ಪ ಸಾಹುಕಾರ, ಬ್ರಿಜೇಶ ಪಾಟೀಲ್, ಎಂ.ಶ್ರೀನಿವಾಸ, ದಾನನಗೌಡ, ಚುಕ್ಕಿ ಶಿವಕುಮಾರ, ವ.ಪಂ.ಅಧ್ಯಕ್ಷ ಹಾಜಿಚೌದ್ರಿ, ರಮೇಶ ದರ್ಶನಕರ, ಚಂದ್ರು ಕಳಸ, ಶಿವಶರಣ ಆರಿಕೇರಿ, ಪ.ಪಂ.ಮಾಜಿ ಅಧ್ಯಕ್ಷ ವೈ.ಭೂಪನಗೌಡ, ರೇಣುಕಾ, ಪ.ಪಂ.ಸದಸ್ಯರಾದ ಸೂರಿ ದುರಗಣ್ಣ ನಾಯಕ, ಮೌಲಾಸಾಬ್ ವರ್ಚಸ್, ಮಾರ್ಕಪ್ಪ, ಹಸೆನಲಿಸಾಬ್, ಚನ್ನಪ್ಪ ಗಡ್ಡ, ಚನ್ನಬಸವ ದೇವರಮನೆ, ಕಲ್ಲೂರು ಬಸವರಾಜ ನಾಯಕ, ಹೆಚ್.ಕೆ. ಅಮರೇಶ, ಕೆಕೆಆರ್‌ಡಿಎಲ್ ಎಇಇ ಹನುಮಂತಪ್ಪ, ತಾ.ಪಂಇಒ ಶಶಿಧರಸ್ವಾಮಿ ಸೇರಿ ಇತರರಿದ್ದರು.

# ಮನೆಪಟ್ಟಿ ತಯಾರಿಯಲ್ಲಿ ಶೇ 100 ರಷ್ಟು ಪ್ರಗತಿಸಾಧಿಸಿದ ಮೇಲ್ವಿಚಾರಕರಿಗೆ ಸನ್ಮಾನ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ 2026–27 ನೇ ಸಾಲಿನ ಭಾರತ ಸರಕಾರದ ಜನಗಣತಿ ಅಂಗವಾಗಿ ನಡೆದ ಮನೆಪಟ್ಟಿ ತಯಾರಿಯಲ್ಲಿ ಶೇ 100 ರಷ್ಟು ಪ್ರಗತಿಸಾಧಿಸುವುದಕ್ಕೆ ಶ್ರಮಿಸಿದ ಮೇಲ್ವಿಚಾರಕರನ್ನು ಮಾನ್ವಿ ಗ್ರಾಮೀಣ ಜನಗಣತಿ ಚಾರ್ಜ ಅಧಿಕಾರಿ ಹಾಗೂ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರು ಸನ್ಮಾನಿಸಿ ಗೌರವಿಸಿ ಮಾತನಾಡಿ ಮಾನ್ವಿ ಗ್ರಾಮೀಣ ಭಾಗದಲ್ಲಿ ಮೊದಲ ಹಂತದಲ್ಲಿ ಗಣತಿದಾರರು ಯಶಸ್ವಿಯಾಗಿ ಶೇ100 ರಷ್ಟು ಪ್ರಗತಿಯನ್ನು ಸಾಧಿಸಿದ್ದಾರೆ ಮಾನ್ವಿ ಗ್ರಾಮಾಂತರ ಭಾಗದಲ್ಲಿ ಒಟ್ಟು ಜನಗಣತಿ ಕಾರ್ಯಕ್ಕಾಗಿ ಒಟ್ಟು 251 ಗಣತಿದಾರರು.38 ಮೇಲ್ವಿಚಾರಕರು, 4 ಮಾಸ್ಟರ್ ತರಬೇತಿದಾರರನ್ನು ನೇಮಕಮಾಡಲಾಯಿತು.ಮಾನ್ವಿ ಗ್ರಾಮೀಣ ಭಾಗದಲ್ಲಿ 1ಲಕ್ಷ 49 ಸಾವಿರ ಜನಸಂಖ್ಯೆಗೆ ಅನುಗುಣವಾಗಿ 40 ಸಾವಿರ ಮನೆಪಟ್ಟಿಯನ್ನು ಗಣತಿದಾರು ಮೇಲ್ವಿಚಾರಕರ ಮಾರ್ಗದರ್ಶನದಲ್ಲಿ ತಯಾರಿಸುವ ಮೂಲಕ ಮೊದಲ ಹಂತದ ಮನೆಪಟ್ಟಿ ತಯಾರಿಕೆಯನ್ನು ಪೂರ್ಣಗೊಳಿಸಿದ್ದಾರೆ ಎರಡನೆ ಹಂತದ ಜನಗಣತಿಯನ್ನು ಕೂಡ ಗಣತಿದಾರರು ಯಶಸ್ವಿಯಾಗಿ ಪೂರ್ಣಗೊಳಿಸಲಿದ್ದಾರೆ ಎಂದು ತಿಳಿಸಿದರು.

ಮಾನ್ವಿ ಗ್ರಾಮೀಣ ಭಾಗದಲ್ಲಿ ಶೇ 100 ರಷ್ಟು ಮನೆಪಟ್ಟಿ ತಯಾರಿ ಪೂರ್ಣಗೊಳಿಸಿದ 38 ಗಣತಿ ಮೇಲ್ವಿಚಾರಕರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಶ್ರೀ ವಾಸವಿ ಜಯಂತಿ ಆಚರಣೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಶ್ರೀ ನಗರೇಶ್ವರ ಹಾಗೂ ಶ್ರೀ ವಾಸವಿ ದೇವಸ್ಥಾನದಲ್ಲಿ ಶ್ರೀ ವಾಸವಿ ಜಯಂತಿ ಅಂಗವಾಗಿ ಬೆಳಿಗ್ಗೆ ಸುಪ್ರಭಾತ ಸೇವೆ, ಶ್ರೀ ವಾಸವಿ ಮಾತೆಗೆ ಕುಂಭಾಭಿಷೇಕ, ಮಹಾಮಂಗಳಾರತಿ, ವಿಶೇಷ ಅಲಂಕಾರ ನಡೆಯಿತು. ಶ್ರೀ ವಾಸವಿ ಮಾತೆಯ ಉತ್ಸವ ಮೂರ್ತಿಗೆ ಸುಮಂಗಲಿಯರಿಂದ ಉಡಿ ಅಕ್ಕಿ ತುಂಬುವ ಕಾರ್ಯಕ್ರಮ ನಡೆಯಿತು. ಭಕ್ತರಿಂದ ಜೋಡಿ ರಥೋತ್ಸವ ನಡೆಯಿತು. ಶ್ರೀ ವಾಸವಿ ಮಾತೆಯ ಉತ್ಸವ ಮೂರ್ತಿಯನ್ನು ರಜತ ಪಲ್ಲಕ್ಕಿಯಲ್ಲಿಟ್ಟು ದೇವಸ್ಥಾನದ ಅವರಣದಲ್ಲಿ ಉತ್ಸವ ನಡೆಸಿ ಬೆಳ್ಳಿ ರಥದಲ್ಲಿಟ್ಟು ಸುಮಂಗಲಿಯರು ಬೆಳ್ಳಿ ರಥವನ್ನು ಎಳೆದು ಸಂಭ್ರಮಿಸಿದರು, ನಂತರ ಭಕ್ತರಿಂದ ಕಟ್ಟಿಗೆ ರಥವನ್ನು ಎಳೆಯಲಾಯಿತು. ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದಿಂದ ವಿವಿಧ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಶ್ರೀ ಲಕ್ಷ್ಮೀ ಮಲ್ಟಿ ಸ್ಪೇಷಾಲಿಟಿ ಹಾಸ್ಪಿಟಲ್,ಶ್ರೀ ಸಾಯಿ ಪವನ ದಂತ ಚಿಕಿತ್ಸಾಲಯ, ಶ್ರೀ ಅಶೋಕ ಮಲ್ಟಿ ಸ್ಪೇಷಾಲಿಟಿ ಡೆಂಟಲ್ ಹಾಸ್ಪಿಟಲ್ ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಾಗೂ ರಾಯಚೂರಿನ ರಿಮ್ಸ್ ರಕ್ತಭಂಡರದ ಸಹಯೋಗದಲ್ಲಿ ಬೃಹತ್ ರಕ್ತದಾನ ಶಿಬಿರ ನಡೆಯಿತು. ಮನ್ನಾಲಿ ಯಂಕಯ್ಯಶೆಟ್ಟಿ ಕುಟುಂಬದವರಿಂದ ಪೂಜದ್ರವ್ಯಗಳ ವಿತರಣೆ ಮಾಡಲಾಯಿತು. ನಡೆಯಿತು,

ಸಂಜೆ ಮಂಗಳೂರಿನ ಚೇತನ ಕಲಾ ತಂಡದವರ ಹುಲಿಕುಣಿತ ಹಾಗೂ ಚಂಡೆ ವಾದ್ಯಗಳೊಂದಿಗೆ ವಾಸವಿ ಮಾತೆಯ ಭವ್ಯ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ತಾ.ಅಧ್ಯಕ್ಷರಾದ ಆರ್.ಮುತ್ತುರಾಜ್ ಶೆಟ್ಟಿ, ಕಾರ್ಯದರ್ಶಿ ಬಿ.ಈರಣ್ಣ, ಜಿ.ಲಕ್ಷ್ಮೀ ರಾಮಾಂಜನೇಯ್ಯಶೆಟ್ಟಿ, ಡಿ.ರಾಧಾ ರಾಘವೇಂದ್ರ ಶೆಟ್ಟಿ, ಎಂ.ಶೋಭಾ ಯಂಕಯ್ಯಶೆಟ್ಟಿ,ಆರ್.ಲಕ್ಷ್ಮೀ ಮುತ್ತುರಾಜ್ ಶೆಟ್ಟಿ,ಬಿ,ರಿಂದಾ ರಾಘವೇಂದ್ರ ಶೆಟ್ಟಿ,ಆರ್ ಅಂಬಿಕಾ ಹನುಮೇಶಶೆಟ್ಟಿ ಸೇರಿದಂತೆ ಆರ್ಯವೈಶ್ಯ ಸಮುದಾಯದವರು ಭಾಗವಹಿಸಿದರು.

# ಹಡಪದ ಅಪ್ಪಣ್ಣನವರ ಅರಿವಿನ ಗವಿ ಪುನಃ ಪ್ರತಿಷ್ಠಾಪನೆಗೆ ಒತ್ತಾಯ



ಧೈರ್ಯದ ದಾರಿ

**ಸಿರವಾರ (ಏಪ್ರಿಲ್ 27):** ಬಸವಕಲ್ಯಾಣದ ತ್ರಿಪುರಾಂತ ಕೆರೆ ಸಮೀಪವಿರುವ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನು ಪುನಃ ಪ್ರತಿಷ್ಠಾಪಿಸಬೇಕೆಂದು ಒತ್ತಾಯಿಸಿ, ತಾಲೂಕು ಹಡಪದ ಅಪ್ಪಣ್ಣ ಸಮಾಜದ ವತಿಯಿಂದ ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು ಹಾಗೂ ಶಾಸಕ ಜಿ. ಹಂಪಯ್ಯನಾಯಕ ಅವರ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಅಕ್ರಮ ಹಸ್ತಕ್ಷೇಪದ ಆರೋಪ: ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಬಸವೇಶ್ವರ ದೇವಸ್ಥಾನದ ಪಂಚ ಕಮಿಟಿಯವರು ಅಕ್ರಮವಾಗಿ ಹಸ್ತಕ್ಷೇಪ ಮಾಡಿ, ಅಪ್ಪಣ್ಣನವರ ಮೂರ್ತಿಯ ಬದಲಿಗೆ ಅನ್ಯ ಶರಣರ ಮೂರ್ತಿಗಳನ್ನು ಪ್ರತಿಷ್ಠಾಪಿಸಿರುವುದು ಸಮುದಾಯದ ಭಾವನೆಗಳಿಗೆ ಧಕ್ಕೆ ತಂದಿದೆ.ನಾಮಫಲಕ ತೆರವು: ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರ ಅಳವಡಿಸಿದ್ದ ಅಪ್ಪಣ್ಣನವರ ಅರಿವಿನ ಗುಹೆಯ ನಾಮಫಲಕವನ್ನು ಕಿಡಿಗೇಡಿಗಳು ರಾತ್ರೋರಾತ್ರಿ ಕಿತ್ತೆಸೆದಿದ್ದಾರೆ ಎಂದು ದೂರಲಾಗಿದೆ.ಯಥಾಸ್ಥಿತಿಗೆ ಆಗ್ರಹ: ತಕ್ಷಣವೇ ಅಕ್ರಮದಲ್ಲಿ ಭಾಗಿಯಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಮತ್ತು ಅಪ್ಪಣ್ಣನವರ ಮೂರ್ತಿಯನ್ನು ಅಲ್ಲಿ ಪುನಃ ಪ್ರತಿಷ್ಠಾಪಿಸಿ, ಆ ಸ್ಥಳವನ್ನು ಅಭಿವೃದ್ಧಿ ಪ್ರಾಧಿಕಾರದ ಸುಪರ್ದಿಗೆ ನೀಡಬೇಕು.ಪ್ರಾಧಿಕಾರಕ್ಕೆ ನೇಮಕ: ತಂಗಡಿಗಿಯ ಪೂಜ್ಯ ಶ್ರೀ ಶ್ರೀ ಅನ್ನದಾನಿ ಭಾರತೀಯ ಅಪ್ಪಣ್ಣ ಮಹಾಸ್ವಾಮಿಗಳನ್ನು ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರನ್ನಾಗಿ ನೇಮಿಸಿ, ಗವಿಯನ್ನು ಸಮರ್ಪಕವಾಗಿ ಅಭಿವೃದ್ಧಿಪಡಿಸಬೇಕು.

ಹೋರಾಟದ ಹಿನ್ನೆಲೆ:ಈಗಾಗಲೇ ಭಾಲ್ಕಿಯ ಪೂಜ್ಯ ಶ್ರೀ ಬಸವಲಿಂಗ ಪಟ್ಟದೇವರು ಹಾಗೂ ಅನೇಕ ಮುಖಂಡರು ಹೋರಾಟ ನಡೆಸಿದ್ದರೂ ನ್ಯಾಯ ದೊರೆತಿಲ್ಲ ಎಂದು ಸಮಾಜದ ಮುಖಂಡರು ಬೇಸರ ವ್ಯಕ್ತಪಡಿಸಿದ್ದಾರೆ.

ಉಪಸ್ಥಿತರಿದ್ದ ಪ್ರಮುಖರು:

ಜಿಲ್ಲಾಧ್ಯಕ್ಷ ಬಸವರಾಜ ಹರವಿ, ಕಾರ್ಯಾಧ್ಯಕ್ಷ ಚಂದ್ರಶೇಖರ ಹಡಪದ, ಮುಖಂಡರಾದ ಬಸವರಾಜ ಭಾಗ್ಯನಗರ, ಅಯ್ಯಪ್ಪ, ಶರಣಬಸವ ನಗನೂರ, ದೇವಪ್ಪ ಎಲಗಟ್ಟಿ ಸೇರಿದಂತೆ ಸಮಾಜದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ತಾಲೂಕು ಕೃಷಿ ಪರಿಕಾರಗಳ ಮಾರಾಟಗಾರರ ಸಂಘದಿಂದ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಕೃಷಿ ಇಲಾಖೆ ಆವರಣದಲ್ಲಿ ತಾಲೂಕು ಕೃಷಿ ಪರಿಕಾರಗಳ ಮಾರಾಟಗಾರರ ಸಂಘ ತಾ.ಘಟಕದವತಿಯಿಂದ ಕೇಂದ್ರ ಸರಕಾರಕ್ಕೆ ಕೃಷಿ ಇಲಾಖೆಯ ತಾಲೂಕು ಸಹಾಯಕ ಕೃಷಿ ನಿರ್ದೇಶಕರಾದ ಗುರುನಾಥಭೂಸನೂರ ರವರ ಮೂಲಕ ಮನವಿ ಸಲ್ಲಿಸಿ ತಾಲೂಕು ಕೃಷಿ ಪರಿಕಾರಗಳ ಮಾರಾಟ ಸಂಘದ ತಾಲೂಕು ಉಪಾಧ್ಯಕ್ಷರಾದ ವೈಜಾನಾಥ ಮಾತನಾಡಿ ಸರಕಾರದಿಂದ ರೈತರಿಗೆ ನೀಡುವ ಡಿಎಪಿ,ಯೂರಿಯದ ಜೋತೆಗೆ ಇತರ ಬೇರೆ ಉತ್ಪಾದನೆಗಳನ್ನು ಲಿಂಕ್ ಮಾಡಬಾರದು. ಎಲ್ಲಾ ರೀತಿಯ ರಸಗೊಬ್ಬರಗಳ ಬೆಲೆಯ ಮೇಲೆ ಶೇ8 ರಷ್ಟು ಡೀಲರ್ ಗಳಿಗೆ ಲಾಭಾಂಶದೊರೆಯಬೇಕು, ರಸಗೋಬ್ಬರ,ಕೀಟನಾಶಕ,ಬೀಜಗಳ ಮಾದರಿಗಳಲ್ಲಿ ಕಳಪೆ ಬಂದಾಗ ಮಾರಾಟಗಾರರನ್ನು ಸಾಕ್ಷಿಯಾಗಿ ಪರಿಗಣಿಸಿ ಕಂಪನಿಯವರ ಮೇಲೆ ಮಾತ್ರ ಮೊಕದಮೆ ಹಾಕಬೇಕು, ಡೀಲರ್‌ಗಳಿಂದ ಸಂಗ್ರಹಿಸಿದ ಮಾದರಿಗಳಿಗೆ ಹಣಪಾವತಿಸಬೇಕು. ರೈತರಿಗೆ ರಸಗೋಬ್ಬರವನ್ನು ಎಫ್.ಐ.ಡಿ. ಮೂಲಕ ಮಾರಾಟಮಾಡುವ ಸಮಯದಲ್ಲಿ ನೀರಾವರಿ ಮತ್ತು ಖುಷ್ಕಿ ಬೇಸಾಯಗಾರರಿಗೆ ಬೆಳೆಗಳ ಅಧಾರದಲ್ಲಿ ರಸಗೋಬ್ಬರ ಪ್ರಮಾಣ ನಿಗದಿ ಮಾಡಬೇಕು. ಹಿಂಗಾರು ಬೆಳೆಗಳವರೆಗೆ ಎಫ್.ಐ.ಡಿ. ಅಧಾರದಲ್ಲಿ ಮಾರಾಟಮಾಡುವುದನ್ನು ಕಡ್ಡಾಯಗೊಳಿಸಬಾರದು. ಬೀಜ ಮಾರಾಟ ಆಫ್ ಅನ್ನು ಮಾರಾಟ ಸ್ನೇಹಿಯಾಗಿ ರೂಪಿಸಬೇಕು ಎಂದು ಒತ್ತಾಯಿಸಿದರು.

ರಾಷ್ಟ್ರ ಕೃಷಿ ಪರಿಕಾರಗಳ ಮಾರಾಟ ಸಂಘ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಹಮ್ಮಿಕೊಳ್ಳಲಾದ ರಾಷ್ಟ್ರವ್ಯಾಪಿ ಬಂದ್‌ಗೆ ಬೆಂಬಲವಾಗಿ ತಾಲೂಕು ಕೃಷಿ ಪರಿಕಾರಗಳ ಮಾರಾಟಗಾರರು ಕೂಡ ತಾಲೂಕಿನಲ್ಲಿ ಕೃಷಿ ಪರಿಕಾರಗಳ ಮಾರಾಟವನ್ನು ಬಂದ್ ಮಾಡಿ ಬೆಂಬಲ ಸೂಚಿಸಿದರು.

ಸುಬ್ಬರಾವು ಚೌಧರಿ, ವೀರಪ್ರಕಾಶ, ದ್ವಾರಕನಾಥ ಶೆಟ್ಟಿ, ಅಮರೇಗೌಡ,ರಮೇಶ, ಎಂ.ಮಲ್ಲಿಕಾರ್ಜುನ ಗೌಡ, ಶರಣಪ್ಪಗೌಡ,ಕೆ.ಎಂ.ರವಿ, ಲಕ್ಷ್ಮಿ ಕಾಂತರೆಡ್ಡಿ,ಮುಕ್ಕಣ್ಣ, ಸೋಮನಗೌಡ, ಬಸವನಗೌಡ, ಮಹಾದೇವಪ್ಪ ಗೌಡ ಕಟಾಲಿ, ಜಿ.ನಾಗರಾಜ, ಆರ್.ಹನುಮೇಶಶೆಟ್ಟಿ, ಸೂಗಯ್ಯಶೆಟ್ಟಿ,ವೈ.ಶ್ರೀನಿವಾಸ. ಜೆ.ಗುರುರಾಜ. ಪ್ರಭು ಕೋಟ್ನೆಕಲ್,ಶಾಂತಮೂರ್ತಿ ಬಾವಿಕಟ್ಟಿ ಸೇರಿದಂತೆ ತಾಲೂಕಿನ ಕೃಷಿ ಪರಿಕಾರಗಳ ಮಾರಾಟಗಾರರು ಭಾಗವಹಿಸಿದರು.

# ಹುನ್ನೂರಿನಲ್ಲಿ 12 ವರ್ಷಕ್ಕೊಮ್ಮೆ ಕಾಶಿಲಿಂಗೇಶ್ವರ ಜಾತ್ರೆ : ಲಕ್ಷಾಂತರ ಭಕ್ತರ ಸಂಭ್ರಮ !150ಕ್ಕೂ ಹೆಚ್ಚು ಡೊಳ್ಳುಗಳ ನಾದದಲ್ಲಿ ಮೂಡಿದ ಜಾತ್ರೆ ವೈಭವ



**ಜಮಖಂಡಿ ಏ.27:**ತಾಲೂಕಿನ ಹುನ್ನೂರು ಗ್ರಾಮದಲ್ಲಿ 12 ವರ್ಷಕ್ಕೊಮ್ಮೆ ನಡೆಯುವ ಶ್ರೀ ಕಾಶಿಲಿಂಗೇಶ್ವರ ಜಾತ್ರೆ ಭಕ್ತಿ, ಐತಿಹಾಸಿಕ ಪರಂಪರೆ ಹಾಗೂ ಸಾಮೂಹಿಕ ಏಕತೆಯ ಸಂಕೇತವಾಗಿ ಅದ್ದೂರಿಯಾಗಿ ನೆರವೇರಿತು.

ಜಾತ್ರಾ ಸಮಿತಿ ಸದಸ್ಯ ನಿಂಗಪ್ಪ ಘಟನಟ್ಟಿ ಅವರು ದೇವಸ್ಥಾನದ ಇತಿಹಾಸವನ್ನು ವಿವರಿಸಿ, ಮೂಲತಃ "ಡಂಗೆಪ್ಪ" ಎಂಬ ಹೆಸರಿನಲ್ಲಿ ದೇವರ ಸ್ಥಾಪನೆ ನಡೆದಿದ್ದು, ಆಲಗೂರ ಗ್ರಾಮದ ಪವಾಡಪುರುಷರಾದ ಬನಸಿದ್ದೇಶ್ವರರು ದೇವರನ್ನು ಹುನ್ನೂರಿಗೆ ತಂದು ದೇವಸ್ಥಾನ ನಿರ್ಮಿಸಿದ್ದಾರೆ ಎಂದು ತಿಳಿಸಿದರು.

ಗ್ರಾಮದಲ್ಲಿ ಭೀಕರ ಬರಗಾಲ ಉಂಟಾದಾಗ, ಬನಸಿದ್ದೇಶ್ವರರ ಸೂಚನೆಯಂತೆ "ಅಂಬಲಿ ಬಾನ" ಆಚರಣೆ ನಡೆಸಿದ ತಕ್ಷಣ ಮಳೆ ಸುರಿದುದಾಗಿ ನಂಬಿಕೆ ಇದ್ದು, ಇದರಿಂದ ಅವರ ಮಹಿಮೆ ಜನರಲ್ಲಿ ಮತ್ತಷ್ಟು ಬಲವಾಗಿದೆ ಎಂದರು.

ಜಾತ್ರೆಯ ವಿಶೇಷವೆಂದರೆ 12 ಜ್ಯೋತಿರ್ಲಿಂಗಗಳ ಪ್ರತಿಷ್ಠಾಪನೆ. ಹಿಮಾಲಯದಿಂದ ತರಲಾದ ಗಿಡಮೂಲಿಕೆಗಳು ಹಾಗೂ ಕುರಿಹಾಲಿನಿಂದ ಲಿಂಗಗಳನ್ನು ಪ್ರತಿಷ್ಠಾಪಿಸಿರುವುದು ಭಕ್ತರ ಗಮನ ಸೆಳೆದಿದೆ.

ಡೊಳ್ಳು (ವಾಳಗ) ಸಂಪ್ರದಾಯವೂ ಜಾತ್ರೆಯ ಪ್ರಮುಖ ಆಕರ್ಷಣೆ. ಡೋಳ್ಳಾಸೂರನ ಕಥೆಯ ಪ್ರಕಾರ, ಅವನು ತನ್ನ ಶರೀರವೇ ಡೊಳ್ಳಿನ ರೂಪ ಪಡೆದು "ಎಲ್ಲಿ ಡೊಳ್ಳು ಬಾರಿಸಿದರೆ ಅಲ್ಲಿ ಪರಮಾತ್ಮ ನೆಲೆಸಲಿ" ಎಂಬ ಆಶೀರ್ವಾದ ಪಡೆದನೆಂಬ ನಂಬಿಕೆ ಇದೆ. ಈ ಹಿನ್ನೆಲೆ ಜಾತ್ರೆಯಲ್ಲಿ 150ಕ್ಕೂ ಹೆಚ್ಚು ಡೊಳ್ಳುಗಳನ್ನು ಬಾರಿಸಲಾಯಿತು.


ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಲ್ಲಪ್ಪ ರೂಗಿ ಮಾತನಾಡಿ, ಜಾತ್ರೆ ಎಲ್ಲಾ ಸಮಾಜದವರ ಸಹಭಾಗಿತ್ವದಲ್ಲಿ ನಡೆಯುತ್ತಿದ್ದು, ಅನ್ನಪ್ರಸಾದ, ಪಲ್ಲಕ್ಕಿ ಉತ್ಸವ, ಕುಂಭಮೇಳ ಸೇರಿದಂತೆ ಹಲವು ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಲಕ್ಷಾಂತರ ಭಕ್ತರು ಭಾಗವಹಿಸಿ ಪ್ರಸಾದ ಸ್ವೀಕರಿಸಿದರು ಎಂದು ಹೇಳಿದರು.

ಪ್ರಮುಖ ಸಂಗಪ್ಪ ಲಾಯನ್ನವರ ಮಾಹಿತಿ ನೀಡಿದಂತೆ, ನಾಲ್ಕು ದಿನಗಳ ಕಾಲ ನಡೆದ ಈ ಜಾತ್ರೆಗೆ ವಿವಿಧ ಜಿಲ್ಲೆಗಳಿಂದ ಭಕ್ತರು ಆಗಮಿಸಿ, ಒಂದು ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸಿದರು.

ಕುಂಭಮೇಳ, ಮುತ್ತೈದೆಯರ ಆರತಿ, ವಿವಿಧ ಪಲ್ಲಕ್ಕಿ ಮೆರವಣಿಗೆಗಳು ಹಾಗೂ ಗಂಗಾಸ್ನಾನ ಕಾರ್ಯಕ್ರಮಗಳು ಜಾತ್ರೆಯ ಮುಖ್ಯ ಆಕರ್ಷಣೆಯಾಗಿದ್ದವು. ರಾತ್ರಿ ವೇಳೆ ಡೊಳ್ಳಿನ ಗಾಯನ ಕಾರ್ಯಕ್ರಮಗಳು ಭಕ್ತರನ್ನು ಮನರಂಜಿಸಿದವು.

ಈ ಸಂದರ್ಭದಲ್ಲಿ ಮಾಜಿ ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣ ಜನವಾಡ, ದೈಹಿಕ ಶಿಕ್ಷಕ ಚನ್ನಪ್ಪ ಚನಾಳ, ಪರಶುರಾಮ ಸವಳತೋಟ, ಬಸಪ್ಪ ಸೂಗಲಿ, ವಸಂತ ಅಗಸಿಮನಿ, ಮೂರ್ತಿ ಕಲಾಜಗೋಳ, ರಾಮಪ್ಪ ಜನವಾಡ ಸೇರಿದಂತೆ ಜಾತ್ರಾ ಸಮಿತಿ ಸದಸ್ಯರು, ಗ್ರಾಮದ ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು.

# ವಚನ ಸಾಹಿತ್ಯ ಸರ್ವಕಾಲಿಕ: ಸಂಗನಬಸವ ಶಿವಾಚಾರ್ಯರು




**ವಿಜಯಪುರ, ಏ. 27:** ವಚನ ಸಾಹಿತ್ಯ ಇಂದಿಗೂ ಸವ9ಕಾಲಿಕ. ಮಾನವೀಯ ಮೌಲ್ಯಗಳಿಂದ ಕೂಡಿದ ಬಸವಾದಿ ಶರಣರ ಕಾಯಕ ತತ್ವ ನಾವೆಲ್ಲರೂ ಪಾಲಿಸಬೇಕು. 12ನೇಶತಮಾನದ ಶಿವಶರಣೆಯರು ಮಾನವೀಯ ಜೀವನಕ್ಕೆ ಪ್ರಾಧ್ಯಾನತೆ ನೀಡಿದ್ದಾರೆಂದು ಮನಗೂಳಿ ಹಿರೇಮಠ ಸಂಸ್ಥಾನದ ಅಭಿನವ ಸಂಗನಬಸವ ಶಿವಾಚಾರ್ಯರು ಅಭಿಪ್ರಾಯ ವ್ಯಕ್ತಪಡಿಸಿದರು.

ರವಿವಾರ ಜಿಲ್ಲಾ, ತಾಲೂಕ ಮತ್ತು ನಗರ ಘಟಕ ಕನ್ನಡ ಸಾಹಿತ್ಯ ಪರಿಷತ್ತು ಆಶ್ರಯದಲ್ಲಿ ಲಿಂ.ಪ್ರಭಾವತಿ ಮಲ್ಲಪ್ಪ ಪಟ್ಟಣಶೆಟ್ಟಿ ದತ್ತಿ. ಲಿಂ. ಮುದಕಯ್ಯ ಮಠ ಹಾಗೂ ಶ್ರೀಮತಿ ಶಂಕ್ರಮ್ಮ ಮಠ ದತ್ತಿ. ಲಿಂ.ಈರವ್ವ ಮಲ್ಲಪ್ಪ ಹನಮಶೆಟ್ಟಿ ದತ್ತಿ, ಕಾಶಿನಾಥ ಸಿದ್ದಮಲ್ಲಪ್ಪ ಇಂಗಳೇಶ್ವರ ದತ್ತಿ ಗೋಷ್ಠಿ ಉದ್ಘಾಟಿಸಿ ಮಾತನಾಡಿದರು. ವಚನಗಳು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ವಚನ ಸಾಹಿತ್ಯ ಮಾನವೀಯ ಮೌಲ್ಯಗಳ ಭಂಡಾರವಾಗಿದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಿಕ್ಯಾಬ್ ಮಹಿಳಾ ಪ. ಪೂ. ಕಾಲೇಜಿನ ಉಪನ್ಯಾಸಕ ಯು.ಎನ್. ಕುಂಟೋಜಿ ಮಾತನಾಡಿ, ವಚನ ಸಾಹಿತ್ಯ, ಕಾಯಕ, ದಾಸೋಹ ಮತ್ತು ಸಮಾನತೆ ಎತ್ತಿ ಹಿಡಿಯುವ ಬಸವಾದಿ ಶರಣರ ತತ್ವ ಕಾರ್ಯ ಸ್ಮರಣೀಯವಾದದ್ದು ಎಂದರು.

ವಚನ ಸಾಹಿತ್ಯ ಕುರಿತು ಉಪನ್ಯಾಸ ನೀಡಿದ ಶಿಕ್ಷಕಿ ಹಾಗೂ ಸಾಹಿತಿ ಶರಣಮ್ಮ ಹಾದಿಮನಿ, ವಚನ ಸಾಹಿತ್ಯ ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಅಮೂಲ್ಯ ಸಂಪತ್ತಾಗಿದೆ. ಇದು ಸಾಮಾಜಿಕ ಸಮಾನತೆ. ಕಾಯಕವೇ ಕೈಲಾಸ. ಲಿಂಗ ಸಮಾನತೆ ಮತ್ತು ಭಕ್ತಿ ಮಾರ್ಗವನ್ನು ತಿಳಿಸುವ ಮೂಲಕ ಸಮಾಜದಲ್ಲಿ ಧಾರ್ಮಿಕ ಮತ್ತು ಸಾಮಾಜಿಕ ಕ್ರಾಂತಿಯನ್ನು ಮಾಡಿತು. ಕಾಯಕ ತತ್ವವನ್ನು ಬೋಧಿಸಿ ದೈಹಿಕ ಶ್ರಮಕ್ಕೆ ಗೌರವ ನೀಡಿದರು ಎಂದರು.

ಕಾಯಕಯೋಗಿ ನುಲಿಯ ಚಂದಯ್ಯ ಕುರಿತು ಶಿಕ್ಷಕ ಯಮನಪ್ಪ ಪವಾರ ಉಪನ್ಯಾಸ ನೀಡಿ, ನುಲಿಯ ಚಂದಯ್ಯ ಅವರ 49 ಕ್ಕೂ ಅಧಿಕ ವಚನಗಳು ದೊರಕಿವೆ. ಚಂದೇಶ್ವರಲಿಂಗ ಅಂಕಿತ ನಾಮದಿಂದ ಇವರ ವಚನಗಳು ದಾಸೋಹಕ್ಕೆ ಪ್ರಧಾನವಾಗಿ ಬರೆದ ಇವರ ವಚನಗಳು ಸಮಾಜಕ್ಕೆ ಬೆಳಕು ಚೆಲ್ಲಿವೆ ಎಂದರು.

ಶರಣ ಚಿಂತಕಿ ಸುಜಾತಾ ಈರಣ್ಣ ಪಟ್ಟಣಶೆಟ್ಟಿ. ಸಮಾಜ ಸೇವಕಿ ಶ್ರೀದೇವಿ ಉತ್ಲಾಸರ ಮಾತನಾಡಿ, ಬಸವಾದಿ ಶರಣರ ಕಾಯಕ ಸಿದ್ಧಾಂತ ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳುವ

ಮೂಲಕ ಕಾಯಕಯೋಗಿ ನುಲಿಯ ಚಂದಯ್ಯ ಅವರ ದಾಸೋಹ ಪ್ರಜ್ಞೆಯನ್ನು ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಇದೇ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾಗಿರುವ ದಲಿತ ಸಾಹಿತ್ಯ ಪರಿಷತ್ತಿನ ವಿಭಾಗಿಯ ಸಂಚಾಲಕ ಎಂ.ಬಿ. ಕಟ್ಟಿಮನಿ ಹಾಗೂ ಇತ್ತೀಚೆಗೆ ಕಾಯಕಯೇಗಿ ಪ್ರಶಸ್ತಿ ಪುರಸ್ಕಾರ ಪಡೆದ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಅವರನ್ನು ಇದೇ ವೇಳೆ ಸನ್ಮಾನಿಸಿ ಗೌರವಿಸಲಾಯಿತು.

# ಡಿಕೆಶಿಗೆ ಸದ್ಯದಲ್ಲೇ ಒಳ್ಳೆಯ ಸ್ಥಾನ ಸಿಗಲಿದೆ



**ಬೆಂಗಳೂರು, ಏ. 27–** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಚರ್ಚೆಗಳು ಮತ್ತೆ ಮುನ್ನಲೆಗೆ ಬಂದಿರುವಾಗಲೇ ಕಾಂಗ್ರೆಸ್ ಶಾಸಕ ಹೆಚ್.ಡಿ. ರಂಗನಾಥ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸದ್ಯದಲ್ಲೇ ಒಳ್ಳೆಯ ಸ್ಥಾನ ಸಿಗಲಿದೆ ಎಂದು ಹೇಳಿರುವುದು ರಾಜಕೀಯ ಬದಲಾವಣೆಯ ಚರ್ಚೆಗೆ ಮತ್ತಷ್ಟು ಬಲ ತುಂಬಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಡಾ. ರಂಗನಾಥ್, ಮೇ ತಿಂಗಳ 15 ರಂದು ಉಪ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜನ್ಮದಿನ ಇದೆ. ಅಷ್ಟೊರಳಗೆ ಸಂತೋಷದ ವಿಚಾರ ಅಥವಾ ಸಿಹಿ ಸುದ್ದಿ ಬರಬಹುದು ಎಂಬ ಆಶಯ ನಮ್ಮೆಲ್ಲರದ್ದಾಗಿದೆ ಎಂದು ಹೇಳಿರುವುದು ಅಚ್ಚರಿ ಮೂಡಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಳ್ಳೆಯ ಆಡಳಿತ ನೀಡುತ್ತಿದ್ದಾರೆ. ಆದರೆ ಮುಂದಿನ ದಿನಗಳಲ್ಲಿ ಡಿ.ಕೆ. ಶಿವಕುಮಾರ್ ಅವರಿಗೂ ಮುಖ್ಯಮಂತ್ರಿ ಸ್ಥಾನ ಸಿಗಬೇಕು ಎಂಬುದು ನಮ್ಮ ಆಸೆ. ಈ ವಿಚಾರ ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲರೂ ಬದ್ಧ. ವರಿಷ್ಠರು ಸೂಕ್ತ ಸಂದರ್ಭದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳುವ ವಿಶ್ವಾಸವಿದೆ. ಎಲ್ಲದಕ್ಕೂ ಕಾಲ ಬರಬೇಕು ಎಂದು ಮಾರ್ಮಿಕವಾಗಿ ಹೇಳಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ನಡುವೆ ಅಧಿಕಾರ ಹಂಚಿಕೆಯ ಒಪ್ಪಂದ ಆಗಿದೆ ಎಂಬ ವಿಚಾರ ಎಲ್ಲರ ತಲೆಯಲ್ಲೂ ಇದೆ. ಆವರಿಬ್ಬರ ಸ್ವರೂಪ ಏನೆಂಬುದು ಹೈಕಮಾಂಡ್ ಸ್ಪಷ್ಟಪಡಿಸಬೇಕು. ಹಾಗೂ ಗೊಂದಲಗಳನ್ನು ಪರಿಹರಿಸಬೇಕು ಎಂಬುದು ಬಹುತೇಕ ಶಾಸಕರ ಅನಿಸಿಕೆಯಾಗಿದೆ ಎಂದು ಹೇಳಿದರು.

ಸಚಿವ ಸುಧಾರಕ್ ಅವರ ಆರೋಗ್ಯ ವಿಚಾರದಲ್ಲಿ ಏನನ್ನೋ ಮುಚ್ಚಿಡಲಾಗುತ್ತಿದೆ ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆ ಸರಿಯಲ್ಲ. ಆರೋಗ್ಯದ ವಿಚಾರದಲ್ಲಿ ಏನನ್ನೂ ಮುಚ್ಚಿಡುವ ಅವಶ್ಯಕತೆ ಸರ್ಕಾರಕ್ಕಿಲ್ಲ. ಅವರ ಆರೋಗ್ಯದ ಬಗ್ಗೆ ಮಾಹಿತಿ ನೀಡಬೇಕಾದರೆ ಮೊದಲು ಅವರ ಕುಟುಂಬ ನಿರ್ಧಾರ ಮಾಡುತ್ತದೆ. ಬಳಿಕ ಆಸ್ಪತ್ರೆ ಮತ್ತು ಸರ್ಕಾರ ಚರ್ಚಿಸಿ ನಿರ್ಧಾರ ಕೈಗೊಳ್ಳುತ್ತದೆ. ಮಾಹಿತಿ ಹಂಚಿಕೊಳ್ಳಲು ಒಂದಷ್ಟು ನಿಯಮಾವಳಿಗಳು. ಇವೆ ಅದರಂತೆ ಎಲ್ಲರೂ ನಡೆದುಕೊಳ್ಳಬೇಕು ಎಂದು ಶಾಸಕ ರಂಗನಾಥ್ ಹೇಳಿದರು.

# 'ಮನ್ ಕೀ ಬಾತ್' ನೇರ ಪ್ರಸಾರ ವೀಕ್ಷಣೆ



**ಯಾದಗಿರಿ:ಏ.27:** ನಗರದ ವಾರ್ಡ್ ನಂ.21ರಲ್ಲಿ ರಾಜಕೀಯ ಚಟುವಟಿಕೆಗಳು ಚುರುಕುಗೊಂಡವು. ಮಾಜಿ ನಗರಸಭೆ ಸದಸ್ಯರಾದ ಶ್ರೀಮತಿ ವಿಜಯಲಕ್ಷ್ಮಿ ನಾನೇಕ್ ಅವರ ನಿವಾಸದಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ 133ನೇ 'ಮನ್ ಕೀ ಬಾತ್' ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಯಾದಗಿರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಯುವ ಮುಖಂಡರು ಹಾಗೂ ಪಕ್ಷದ ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಶ್ರೀ ಮಹೇಶರಡ್ಡಿ ವೆಂಕಟರಡ್ಡಿ ಮುದ್ನಾಳ ಅವರು ಭಾಗವಹಿಸಿ, ಪ್ರಧಾನಿಯವರ ಮಾತುಗಳನ್ನು ಗಮನದಿಂದ ವೀಕ್ಷಿಸಿದರು. ದೇಶದ ಅಭಿವೃದ್ಧಿ, ಜನಸಾಮಾನ್ಯರ ಕಲ್ಯಾಣ ಮತ್ತು ಸಾಮಾಜಿಕ ವಿಷಯಗಳ ಕುರಿತು ಪ್ರಧಾನಿಯವರು ಹಂಚಿಕೊಂಡ ವಿಚಾರಗಳು ಕಾರ್ಯಕರ್ತರಲ್ಲಿ ಹೊಸ ಉತ್ಸಾಹವನ್ನು ಮೂಡಿಸಿವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಶ್ರೀ ರುದ್ರಗೌಡ ಪಾಟೀಲ್, ನಗರ ಮಂಡಲ ಅಧ್ಯಕ್ಷರಾದ ಶ್ರೀ ಲಿಂಗಪ್ಪ ಹತ್ತಿಮನಿ, ಪ್ರಧಾನ ಕಾರ್ಯದರ್ಶಿ ಶ್ರೀ ರಮೇಶ ದೊಡ್ಡಮನಿ, ಉಪಾಧ್ಯಕ್ಷರಾದ ಶ್ರೀ ಜಿತೇಂದ್ರ ನವಿಲುಗರಿ ಸೇರಿದಂತೆ ಅನೇಕ ಪ್ರಮುಖರು ಉಪಸ್ಥಿತರಿದ್ದರು.

ಜೊತೆಗೆ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷರಾದ ಶ್ರೀಮತಿ ಸುನೀತಾ ಚವ್ಹಾಣ್, ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷರಾದ ಶ್ರೀಮತಿ ಭೀಮಾಬಾಯಿ ಸೆಂಡಗಿ, ಆತಿಥೇಯರಾದ ವಿಜಯಲಕ್ಷ್ಮಿ ನಾನೇಕ್, ಶ್ರೀಮತಿ ಗುಂಡಮ್ಮ ಗೊಂದೇನೂರು ಸೇರಿದಂತೆ ಹಲವಾರು ಕಾರ್ಯಕರ್ತರು ಪಾಲ್ಗೊಂಡು ಕಾರ್ಯಕ್ರಮಕ್ಕೆ ಕಂಗೊಳಿಸಿದರು.

ಒಟ್ಟಿನಲ್ಲಿ, 'ಮನ್ ಕೀ ಬಾತ್' ವೀಕ್ಷಣೆ ಕಾರ್ಯಕ್ರಮವು ಕಾರ್ಯಕರ್ತರಲ್ಲಿ ದೇಶಭಕ್ತಿ ಮತ್ತು ಸಂಘಟನೆಯ ಬಲವರ್ಧನೆಗೆ ಹೊಸ ಚೈತನ್ಯ ತುಂಬಿದಂತಾಯಿತು.

# ಕಲ್ಯಾಣ ಕರ್ನಾಟಕ ಅಭಿವೃದ್ಧಿ ಕುರಿತು ಆದಷ್ಟು ಶೀಘ್ರ ಬೃಹತ್ ವಿಚಾರ ಸಂಕಿರಣ : ಹೋರಾಟ ಸಮಿತಿ

**ಕಲಬುರಗಿ,ಏ.27**–ಸಿದ್ಧರಾಮಯ್ಯ ನೇತೃತ್ವದ ಸರಕಾರ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಗೋವಿಂದರಾವ ನೇತೃತ್ವದಲ್ಲಿ ಪ್ರಾದೇಶಿಕ ಅಸಮತೋಲನಾ ಸಮಿತಿ ರಚನೆ ಮಾಡಿ ಕಾಲಮಿತಿಯಲ್ಲಿ ವರದಿ ಸಲ್ಲಿಸಲು ನಿರ್ದೇಶನ ನೀಡಿರುವಂತೆ ಗೋವಿಂದರಾವ್ ಸಮಿತಿ ಸರಕಾರಕ್ಕೆ ಈಗಾಗಲೇ ವರದಿ ಸಲ್ಲಿಸಿದೆ.

ಈ ವರದಿಗೆ ಸಂಬಂಧಿಸಿ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಕೋರ್ ಕಮಿಟಿಯಲ್ಲಿ ಪರಾಮರ್ಶೆ ನಡೆಸಲಾಯಿತು. ಇದರ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿ ಸರ್ವಾನುಮತದ ನಿರ್ಣಯದಂತೆ ಆದಷ್ಟು ಶೀಘ್ರ ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ಕಾಲಮಿತಿಯ ಅಭಿವೃದ್ಧಿ ಕುರಿತು ಆದಷ್ಟು ಶೀಘ್ರ ಶಿಕ್ಷಣ ಸಂಸ್ಥೆಗಳ ಮತ್ತು ಸಂಘ ಸಂಸ್ಥೆಗಳ ಸಂಯೋಗದಲ್ಲಿ ಆದಷ್ಟು ಶೀಗ್ರ ಬೃಹತ್ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗುವದೆಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವ ಅಧ್ಯಕ್ಷರಾದ ಬಸವರಾಜ ದೇಶಮುಖ, ಸಂಸ್ಥಾಪಕ ಅಧ್ಯಕ್ಷರಾದ ಡಾ. ಲಕ್ಷ್ಮಣ ದಸ್ತಿಯವರು ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ವತಿಯಿಂದ ಗೋವಿಂದರಾವ್ ನೇತೃತ್ವದ ಪ್ರಾದೇಶಿಕ ಅಸಮತೋಲನ ಸಮಿತಿ ಕರ್ನಾಟಕ ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ಮಾನವ ಅಭಿವೃದ್ಧಿ ಮತ್ತು ಇತರೆ

ಕ್ಷೇತ್ರಗಳಲ್ಲಿ ಅತ್ಯಂತ ಹಿಂದುಳಿದ ಸ್ಥಾನದಲ್ಲಿರುವ ಬಗ್ಗೆ ಉಲ್ಲೇಖಿಸಿರುವ ಬಗ್ಗೆ ಕಲ್ಯಾಣದ ಸಚಿವರು, ಸಂಸರು, ಶಾಸಕರು, ಗಂಭೀರವಾಗಿ ಪರಿಗಣಿಸಬೇಕೆಂದು ಸಮಿತಿಯ ಗೌರವಾಧ್ಯಕ್ಷರಾದ ಬಸವರಾಜ ದೇಶಮುಖ ರವರು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ ಪರಿಣಿತ ತಜ್ಞರಾದ ಪ್ರೊ. ಆರ್.ಕೆ. ಹುಡಗಿ, ಗೋವಿಂದರಾವ್ ನೇತೃತ್ವದ ಸಮಿತಿಯ ಸದಸ್ಯರು ಮತ್ತು ರಾಜ್ಯದ ನೀತಿ ಮತ್ತು ಯೋಜನಾ ಆಯೋಗದ ಸದಸ್ಯರು ಆದ ಡಾ.

ಸಂಗೀತಾ ಕಟ್ಟಿ, ಪ್ರೊ. ಸನಾವುಲ್ಲಾ ಮಾತನಾಡಿ ಕಲ್ಯಾಣ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಕಾಲಮಿತಿಯ ಕ್ರೀಯಾ ಯೋಜನೆ ಹಮ್ಮಿಕೊಳ್ಳುವುದು ಅತಿ ಅವಶ್ಯವಾಗಿದೆ. ಈ ನಿಟ್ಟಿನಲ್ಲಿ ಕಲ್ಯಾಣದ

ಸಚಿವರು, ಸಂಸದರು, ಶಾಸಕರುಗಳನ್ನೊಳಗೊಂಡಂತೆ ದುಂಡು ಮೇಜಿನ ಸಭೆಗಳು ಮತ್ತು ಬೃಹತ್ ವಿಚಾರ ಸಂಕಿರಣಗಳು ನಡೆಸಿ ಸರಕಾರಕ್ಕೆ ಕಲ್ಯಾಣದ ಪ್ರಾದೇಶಿಕ ಅಸಮತೋಲನೆ ನಿವಾರಣೆ ಬಗ್ಗೆ ಬಲವಾದ ಒತ್ತಡ ತರಲು ಸಭೆಯಲ್ಲಿ ತಮ್ಮ ವಿಚಾರಗಳನ್ನು ಮಂಡಿಸಿದರು.

ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಲಕ್ಷ್ಮಣ ದಸ್ತಿಯವರು ಮಾತನಾಡಿ ಕಲ್ಯಾಣ ಕರ್ನಾಟಕ ಪ್ರದೇಶಕ ದೀರ್ಘ ಕಾಲದ ಹೋರಾಟ ಮತ್ತು ಬಲವಾದ ರಾಜಕೀಯ ಇಚ್ಛಾಶಕ್ತಿಯಿಂದ ಸಂವಿಧಾನದ 371ನೇ (ಜೆ) ಕಲಂ ಸಿಕ್ಕಿರುವುದರಿಂದ ನಮ್ಮ ಪ್ರದೇಶದ ಅಭ್ಯರ್ಥಿಗಳಿಗೆ ವೃತ್ತಿಪರ ಕೋರ್ಸುಗಳಲ್ಲಿ 100ರಷ್ಟು ಲಾಭವಾಗಿದೆ, ನೇಮಕಾತಿಗಳಲ್ಲಿ ಅನುಷ್ಠಾನಾಧಿಕಾರಿಗಳ ನಿರ್ಲಕ್ಷದಿಂದ ನೇಮಕಾತಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ, ಅದರಂತೆ, ಮುಂಬಡ್ತಿಗಳು ಸಹ ಸಹಜ ಪ್ರಕ್ರಿಯೆಯಂತೆ ನಡೆಯದೆ ಕಲ್ಯಾಣ ಕರ್ನಾಟಕದ ಅಭ್ಯರ್ಥಿಗಳಿಗೆ ಮಾನಸಿಕ ಹಿಂಸೆಯ ರೀತಿಯಲ್ಲಿ ತೊಂದರೆ ಕೊಡುತ್ತಿದ್ದಾರೆ. ಈ ಬಗ್ಗೆ ಕಲ್ಯಾಣದ ಸಚಿವರು, ಗಂಭೀರವಾಗಿ ಪರಿಗಣಿಸಲು ಸಭೆಯಲ್ಲಿ ತಮ್ಮ ವಿಚಾರವನ್ನು ವ್ಯಕ್ತಪಡಿಸಿದರು. ಮುಂದುವರೆದು, ಅವರು ಈಗಾಗಲೇ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು



371ನೇ(ಜೆ) ಕಲಂ ಅನುಷ್ಠಾನ ಸಂಪುಟ ಉಪ ಸಮಿತಿಯ ಅಧ್ಯಕ್ಷರಾದ ಪ್ರಿಯಾಂಕ್ ಖರ್ಗೆಯವರ ಗಮನಕ್ಕೆ ತಂದಿರುವಂತೆ ಆದಷ್ಟು ಶೀಘ್ರ ಕಲ್ಯಾಣ ಕರ್ನಾಟಕದ ರಚನಾತ್ಮಕ ಪ್ರಗತಿಯ ಕುರಿತು ಮತ್ತು 371ನೇ(ಜೆ) ಕಲಂ ಸಾಧನೆಯ ಆಶೆಯ ಬಗ್ಗೆ ಶಿಕ್ಷಣ ಸಂಸ್ಥೆಗಳ,

ಸಂಘ ಸಂಸ್ಥೆಗಳ ಪ್ರಮುಖರೊಂದಿಗೆ ಚರ್ಚಿಸಿ ಆದಷ್ಟು ಶೀಘ್ರ ದಿನಾಂಕವನ್ನು ನಿಗದಿ ಮಾಡಿ ವಿಭಾಗಿಯ ಕೇಂದ್ರ ಕಲಬುರಗಿಯಲ್ಲಿ ಬೃಹತ್ ವಿಚಾರ ಸಂಕಿರಣ ಹಮ್ಮಿಕೊಳ್ಳುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವದೆಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿಗೆ ಭಾಜನರಾದ ಡಾ. ಸಂಗೀತಾ ಕಟ್ಟಿಮನಿ ಮತ್ತು ಬಸವಶ್ರೀ ಪ್ರಶಸ್ತಿಗೆ ಭಾಜನರಾದ ಪ್ರೊ.ಆರ್.ಕೆ. ಹುಡಗಿಯವರಿಗೆ ಗೌರವ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಪ್ರಮುಖರಾದ ಕೈಲಾಸನಾಥ ದೀಕ್ಷಿತ್, ಅಬ್ದುಲ ರಹೀಂ, ಕೆ.ಎಂ. ಬಿರಾದಾರ, ರೌಫ್ ಖಾದ್ರಿ, ಎಂ.ಬಿ. ನಿಂಗಪ್ಪ, ಅಸ್ಲಂ ಚೌಂಗೆ, ಶರಣಗೌಡ ಪಾಟೀಲ ಪಾಳಾ, ವಿಜಯಕುಮಾರ ದೇಶಪಾಂಡೆ,

ಶ್ರೀಕಾಂತ ಪಾಟೀಲ್, ಮುತ್ತಣ್ಣ ನಡಗೇರಿ, ವಿಶ್ವನಾಥ ಬಿರಾದಾರ, ರವಿಂದ್ರ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ ಪರಿಹಾರ ನೀಡಿ: ಪೋಲಪ್ಪ ನಾರಾಯಣ್ಣೋರ್ ಕರೆ



**ಯಾದಗಿರಿ:ಏ.27:** ಜಿಲ್ಲೆಯ ರೈತಾಪಿ ವರ್ಗ ಎದುರಿಸುತ್ತಿರುವ ಸಂಕಷ್ಟಗಳಿಗೆ ತಕ್ಷಣ ಸ್ಪಂದಿಸಿ, ಅವರಿಗೆ ನೈಜ ಬೆಂಬಲ ನೀಡುವುದು ಪ್ರತಿಯೊಬ್ಬ ಪದಾಧಿಕಾರಿಗಳ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕಾರ್ಮಿಕ ಸೇನೆ ಜಿಲ್ಲಾಧ್ಯಕ್ಷ ಪೋಲಪ್ಪ ಎಂ. ನಾರಾಯಣ್ಣೋರ್ ಹೇಳಿದರು.

ನಗರದ ಹಳೆಯ ಪ್ರವಾಸಿ ಮಂದಿರದಲ್ಲಿ ಭಾನುವಾರ ನಡೆದ ವಡಗೇರಾ ತಾಲೂಕು ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಅವರು ಮಾತನಾಡಿದರು. ರೈತರ ಸಮಸ್ಯೆಗಳು ಕೇವಲ ಮಾತಿನಲ್ಲಿ ಸೀಮಿತವಾಗದೇ, ತಕ್ಷಣ ಪರಿಹಾರ ಕಂಡುಕೊಳ್ಳುವ ದಿಸೆಯಲ್ಲಿ ಕಾರ್ಯಪ್ರವೃತ್ತರಾಗಬೇಕು. ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ರೈತರಿಗೆ ಎದುರಾಗುವ ಜಮೀನಿನ ವ್ಯವಹಾರಗಳು, ಕಚೇರಿ ಸಂಬಂಧಿತ ಅಡಚಣೆಗಳು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡುವ ಮೂಲಕ ಸಹಾಯ ಮಾಡಬೇಕು ಎಂದು ಸೂಚಿಸಿದರು.

ಇದಲ್ಲದೆ, ರೈತರಿಗೆ ಆಗುವ ಯಾವುದೇ ಅನ್ಯಾಯದ ವಿರುದ್ಧ ಸಂಘಟನೆ ಸದಾ ಅವರ ಬೆಂಬಲವಾಗಿ ನಿಲ್ಲಬೇಕು ಎಂದು ತಿಳಿಸಿದರು.ಸಭೆಯಲ್ಲಿ ವಡಗೇರಾ ತಾಲೂಕು ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಭೀಮಶಪ್ಪ ಬಾಗ್ಲಿ ಅವರನ್ನು ತಾಲೂಕು ಅಧ್ಯಕ್ಷರಾಗಿ, ಚನ್ನಬಸವ ಗೊಡಿಹಾಳ ಅವರನ್ನು ಉಪಾಧ್ಯಕ್ಷರಾಗಿ, ಜಗದೀಶ್ ವಿಶ್ವಕರ್ಮ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ, ಮಾರ್ಕಪ್ಪ ಟೇಲರ್ ಅವರನ್ನು ಸಹ ಕಾರ್ಯದರ್ಶಿಯಾಗಿ, ಸಾಬಣ್ಣ ಅವರನ್ನು ಖಜಾಂಚಿಯಾಗಿ ನೇಮಕ ಮಾಡಲಾಯಿತು. ಇತರ ಪದಾಧಿಕಾರಿಗಳಾಗಿ ಸಿದ್ದಣ್ಣೋರ್, ದೇವಪ್ಪ ದೊರೆ, ಮಲ್ಲಿಕಾರ್ಜುನ ದೊರೆ, ನಿಂಗಪ್ಪ ಕಟ್ಟಿಮನಿ, ಯಂಕಪ್ಪ ದೊಡ್ಡಮನಿ, ಮಲ್ಲಪ್ಪ ದೊಡ್ಡಮನಿ, ಲಕ್ಷ್ಮಣ ಗೊಡಿಹಾಳ, ಬಸ್ಸಪ್ಪ ಗೊಡಿಹಾಳ, ಖಾಡಪ್ಪ ಕುಮನೂರ್, ಮರೆಪ್ಪ ಅಗ್ನಾಳ, ಸಾಬಣ್ಣ ಕುರಕುಂದಿ ಹಾಗೂ ದೇವರಾಜ್ ಶಿವಪೂರ ಅವರನ್ನು ಆಯ್ಕೆ ಮಾಡಲಾಗಿದೆ.

ಈ ವೇಳೆ ಯಾದಗಿರಿ ಜಿಲ್ಲಾ ಗೌರವ ಅಧ್ಯಕ್ಷರಾಗಿ ದೇವಿಂದ್ರಪ್ಪ ವಾರಿ ಅವರನ್ನು ಆಯ್ಕೆ ಮಾಡಲಾಗಿದ್ದು, ಸಭೆಯಲ್ಲಿ ಸಂಘದ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

# ಶಾಮಸುಂದರ ದಾಸರ 70 ನೇ ವರ್ಷದ ಆರಾಧನೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಶ್ರೀ ಜಗನ್ನಾಥ ದಾಸರ ಮಂದಿರದಲ್ಲಿ ಶಾಮಸುಂದರ ದಾಸರ ಸೇವಾ ಸಮಿತಿ ವತಿಯಿಂದ ಶ್ರೀ ಶಾಮಸುಂದರ ದಾಸರ 70 ನೇ ವರ್ಷದ ಆರಾಧನೆ ಮಹೋತ್ಸವವನ್ನು ಆಚರಿಸಲಾಯಿತು.

ಶ್ರೀ ಶಾಮಸುಂದರ ದಾಸರ 70 ನೇ ವರ್ಷದ ಆರಾಧನೆ ಮಹೋತ್ಸವ ಅಂಗವಾಗಿ ಬೆಳಿಗ್ಗೆ 6 ಗಂಟೆಯಿಂದ ಶ್ರೀ ಜಗನ್ನಾಥ ದಾಸರ ಕಂಬಸ್ಥಂಭಕ್ಕೆ ಪಂಚಾಮೃತಾಭಿಷೇಕ,ವಿಶೇಷ ಅಲಂಕಾರ, ಶ್ರೀ ಸುಬುದೇಂದ್ರ ತೀರ್ಥ ಅಷ್ಟೋತ್ತರ ಸಮಿತಿಯಿಂದ ಶ್ರೀ ರಾಘವೇಂದ್ರ ಸ್ವಾಮಿಗಳ ಅಷ್ಟೋತ್ತರ ನೆರವೇರಿಸಲಾಯಿತು. ಪಂಡಿತ. ಭೀಮಸೇನ ದೇಸಾಯಿ ರವರು ಶಾಮಸುಂದರ ದಾಸರ ಜೀವನ ಹಾಗೂ ಅವರು ರಚಿಸಿದ ಕೃತಿಗಳ ಬಗ್ಗೆ ಪ್ರವಚನ ನೀಡಿದರು.

ಡಾ.ವಿಜಯರಾವ ಕುಪನೇಶಿ ನೇತೃತ್ವದಲ್ಲಿ ಪಟ್ಟಣದ ಕಚೇರಿ ಆಂಜನೇಯಸ್ವಾಮಿ ದೇವಸ್ಥಾನದಿಂದ ಶ್ರೀ ಜಗನ್ನಾಥ ದಾಸರ ಮಂದಿರದ ವರೆಗೆ ಶಾಮಸುಂದರ ದಾಸರ ಭಾವಚಿತ್ರದೊಂದಿಗೆ ಗ್ರಾಮ ಪ್ರದಕ್ಷಿಣೆ ನಡೆಸಲಾಯಿತು. ದಾಸರ್ಯ ಮಹಿಳಾ ಭಜನಾ ಮಂಡಳಿಯಿಂದ ದಾಸರ ಹಾಡುಗಳನ್ನು ಹಾಡಿದರು.

ಶಾಮಸುಂದರ ದಾಸರ ಸೇವಾ ಸಮಿತಿ ಅಧ್ಯಕ್ಷ ವೆಂಕೋಬರಾವ ದೇಸಾಯಿ ಅರ್ನಳ್ಳಿ,ಎ.ಎನ್.ರಾಜು ವಕೀಲರು,ವಾಸುದೇವರಾವ ಕಪಗಲ್,ನರಸಿಂಹ ಅಪೂಟ,ಪ್ರಲ್ಹಾದ ಕುರ್ಡಿ,ಅರ್ಚಕ ಪ್ರಲ್ಹಾದಾಚಾರ್ಯ ಸೇರಿದಂತೆ ವಿಪ್ರಭಾಂದವರು ಹಾಗೂ ಅರ್ಯವೈಶ್ಯ ಸಮುದಾಯದವರು ಭಾಗವಹಿಸಿದರು.

# ಜೆಸ್ಕಾಂ: ಏಪ್ರಿಲ್ 29ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ ಕೇಂದ್ರದ ಯರಗೇರಾ, ಮಲ್ಲಾಪೂರು, ಎಲ್.ಕೆ.ದೊಡ್ಡಿ, ಜಂಬಲದಿನ್ನಿ ಫೀಡರ್‌ಗಳಲ್ಲಿ ತುರ್ತು ನಿರ್ವಹಣ ಕಾರ್ಯ ಹಮ್ಮಿಕೊಂಡಿರು ಪ್ರಯುಕ್ತ ಏಪ್ರಿಲ್ 29ರ ಬುಧವಾರ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್‌ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಂಡರ್ ಸಮಾಜದಿಂದ ಸೃಷ್ಟಿಸಲ್ಪಟ್ಟಿದೆ:ಲಿಂಗಾರೆಡ್ಡಿ ನಾಯಕ

**ಸೈದಾಪುರ:ಏ.27:**ಜೆಂಡರ್ ಸಮಾಜದಿಂದ ಸೃಷ್ಟಿಸ್ಪಲಟ್ಟಿದ್ದೇ ಅದು ಸ್ವಾಭಾವಿಕವಲ್ಲ. ಸ್ತ್ರೀ ಪುರುಷರ ಸಾಮಾಜಿಕ ಸಂಬಂಧಗಳನ್ನು ಸೂಚಿಸುವ ಪದವೇ ಜೆಂಡರ. ಉತ್ತಮ ಸಾಮಾಜಿಕ ವ್ಯವಸ್ಥೆಯನ್ನು ಕಾಣುವಲ್ಲಿ ಸಮಾನತೆ ಬಹಳ ಮುಖ್ಯವಾಗಿದೆ ಎಂದು ಮುಖ್ಯಗುರು ಲಿಂಗಾರೆಡ್ಡಿ ನಾಯಕ ಅಭಿಪ್ರಾಯಪಟ್ಟರು. ಪಟ್ಟಣದ ವಿದ್ಯಾ ವರ್ಧಕ ಡಿ.ಎಲ್.ಇಡಿ ಕಾಲೇಜಿನಲ್ಲಿ ಅಜೀಮ ಪ್ರೇಮಜಿ ಫೌಂಡೇಶನ ವತಿಯಿಂದ ಹಮ್ಮಿಕೊಂಡ ಜಂಡರ ಮೇಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸಾಮಾಜಿಕ ಪರಿವರ್ತನೆಗೆ ಶಿಕ್ಷಣವೇ ಮೂಲ ಕಾರಣವಾಗಿದ್ದೂ ವ್ಯಕ್ತಿಯ ಸಮಗ್ರ ವ್ಯಕ್ತಿತ್ವ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಈ ದಿಸೆಯಲ್ಲಿ ಶಿಕ್ಷಕರಾಗುವ ನೀವು ಜೆಂಡರನ ಅರ್ಥ ವ್ಯಾಪ್ತಿ ತಿಳಿದುಕೊಳ್ಳುವುದು ಬಹಳ ಮುಖ್ಯವಾಗಿದೆ ಎಂದು ಹೇಳಿದರು.

ಕೊಂಕಲ ವಲಯದ ಕನ್ನಡ ಸಂಪನ್ಮೂಲ ವ್ಯಕ್ತಿಗಳಾಗಿ ರಮೇಶ.ಎನ್ ಅವರು ಪ್ರಶಿಕ್ಷಣಾರ್ಥಿಗಳಿಗೆ ವಿವಿಧ ಪ್ರಾಯೋಗಿಕ ಚಟುವಟಿಕೆಗಳನ್ನು ಮೂಲಕ ಸಮಾನತೆಯ ಬಗಗೆ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಕರಬಸಯ್ಯ ದಂಡಿಗಿಮಠ, ಹಂಪಣ್ಣ ಸಜ್ಜನಶೆಟ್ಟಿ, ಉಪನ್ಯಾಸಕರಾದ ಸಾಬಯ್ಯ ರಾಯಪ್ಪನೋರ, ಹಣಮರೆಡ್ಡಿ ಮೋಟ್ನಳ್ಳಿ, ಶ್ವೇತಾ ರಾಘವೇಂದ್ರ ಪೂರಿ, ಆನಂದ ಪಾಟೀಲ, ಅಜೀಮ ಪ್ರೇಮಜೀ ಫೌಂಡೇಶನ



ಸೈದಾಪುರ ವಲಯದ ಶಿಕ್ಷಕರ ಕಲಿಕಾ ಕೇಂದ್ರ ಸಂಯೋಜಕರಾದ ಮಲ್ಲೇಶ ವಗ್ಗರ ಸೇರಿದಂತೆ ಡಿ.ಎಲ್.ಇಡಿ ಪ್ರಥಮ ಹಾಗೂ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಈ ವಿದಧ ಕಾರ್ಯಕ್ರಮ ಬಹಳ ಮಹತ್ವದ್ದಾಗಿದೆ. ಇದು ಮುಂದಿನ ವೃತ್ತಿಯ ಸಂದರ್ಭದಲ್ಲಿ ಉತ್ತಮ ನಾಗರಿಕರನ್ನು ನಿರ್ಮಾಣ ಮಾಡುವಲ್ಲಿ ಸಹಾಯಕವಾಗುತ್ತದೆ. ಪ್ರಾಯೋಗಿಕ ಚಟುವಟಿಕೆಗಳ ಮೂಲಕ ಜೆಂಡರ್ ಬಗೆಗಿನ ಮಾಹಿತಿಯನ್ನು ಅರ್ಥ ಪೂರ್ಣವಾಗಿ ಅಜೀಮ ಪ್ರೇಮಜಿ ಪೌಂಡೇಶನದವರು ತಿಳಿಸಿಕೊಟ್ಟಿದ್ದಾರೆ. ಇದರ ಸದುಪಯೋಗ ನಮ್ಮದಾಗಬೇಕು.

ಕರಬಸಯ್ಯ ದಂಡಿಗಿಮಠ ಪ್ರಾಂಶುಪಾಲರು ವಿ.ವ.ಡಿ.ಎಲ್.ಇಡಿ ಕಾಲೇಜು ಸೈದಾಪುರ.

# ಪುಸ್ತಕ ಮೇಳ: 5 ಲಕ್ಷಕ್ಕೂ ಹೆಚ್ಚು ವಹಿವಾಟು: ಹೊಸಮನಿ




**ವಿಜಯಪುರ, ಏ. 27 :** ಸಾಮಾಜಿಕ ಜಾಲತಾಣದಲ್ಲಿ ಮುಳುಗಿ ಹೋಗಿರುವ ಯುವಕರಿಗೆ ಹೊತ್ತಿಗೆಯ ಬಗ್ಗೆ ಒಲವು ಮೂಡಿಸಿ ಅವರಲ್ಲಿ ಬುದ್ಧ–ಬಸವ–ಬಾಬಾಸಾಹೇಬರ ಚಿಂತನೆಯನ್ನು ಬೆಳೆಸುವ ನಿಟ್ಟಿನಲ್ಲಿ ಪ್ರಥಮ ಪ್ರಯತ್ನವಾಗಿ ಮೇ ಸಾಹಿತ್ಯ ಬಳಗದಿಂದ ಸಂಘಟಿಸಲಾಗಿದ್ದ ಪುಸ್ತಕ ಮೇಳ ಯಶಸ್ವಿಯಾಗಿದ್ದು, ಐದು ಲಕ್ಷ ರೂ. ಮಿಕ್ಕಿ ವಹಿವಾಟು ನಡೆದಿದೆ, ಜನರು ಪುಸ್ತಕದ ಬಗ್ಗೆ ಒಲವು ಕಡಿಮೆಯಾಗಿಲ್ಲ ಎನ್ನುವುದು ಇದಕ್ಕೆ ಮತ್ತೊಮ್ಮೆ ಸಾಕ್ಷೀಕರಿಸಿದೆ, ಈ ಮೇಳವನ್ನು ಮುಂದಿನ ವರ್ಷವೂ ಅತ್ಯಂತ ಅಚ್ಚುಕಟ್ಟುತನದಿಂದ ಆಯೋಜಿಸಲಾಗುವುದು ಎಂದು ಮೇ ಸಾಹಿತ್ಯ ಬಳಗದ ಅನೀಲ ಹೊಸಮನಿ ಹೇಳಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿವರಣೆ ನೀಡಿದ ಅವರು, ಮೇ ಸಾಹಿತ್ಯ ಬಳಗ ಸಂಘಟಿಸಿದ ಪುಸ್ತಕ ಮೇಳ ಯಶಸ್ವಿಯಾಗಿದೆ, ಬುದ್ಧ, ಬಸವ ಹಾಗೂ ಬಾಬಾಸಾಹೇಬರ ತತ್ವ ಚಿಂತನೆ, ಆಶಯಗಳ ಆಧರಿಸಿ ಸಮಾಜ ಇನ್ನೂ ನಿರ್ಮಾಣವಾಗಿಲ್ಲ, ಈ ಮಹನೀಯರ ಸಮ ಸಮಾಜದ ಕನಸು ನನಸಾಗಿಸಲು ಪ್ರತಿಯೊಬ್ಬರು ಶ್ರಮಿಸಬೇಕಿದೆ, ಈ ಪ್ರಯತ್ನದ ಭಾಗವಾಗಿ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಮುಳುಗಿ ಹೋಗಿರುವ ಯುವಜನರಿಗೆ ಹೊತ್ತಿಗೆಯ ಒಲವು ಮೂಡಿಸುವ ನಿಟ್ಟಿನಲ್ಲಿ ಈ ಪುಸ್ತಕ ಮೇಳವನ್ನು ಆಯೋಜಿಸಲಾಗಿತ್ತು, ನಮ್ಮ ಕರೆಗೆ ಓಗೊಟ್ಟು 35 ಕ್ಕೂ ಹೆಚ್ಚು ಪ್ರಕಾಶನ ಸಂಸ್ಥೆಗಳು ಆಗಮಿಸಿದ್ದವು ಎಂದರು.

ವಿಜಯಪುರದಲ್ಲಿ ಪುಸ್ತಕ ಖರೀದಿ ಆಗುವುದಿಲ್ಲ ಎಂಬ ಮನೋಭಾವ ಹೊಂದಿದ್ದರು, ಆದರೆ ಇಲ್ಲಿ ಬಂದ ಮೇಲೆ ಅವರ ಅಭಿಪ್ರಾಯ ಹಾಗೂ ಮನೋಭಾವ ಬದಲಾಗಿದ್ದು, ಅನೇಕರು ಆಸಕ್ತಿಯಿಂದ ಪುಸ್ತಕ ಖರೀದಿ ಮಾಡಿರುವುದು ಅನೇಕ ಪ್ರಕಾಶಕರಿಗೆ ಸಂತೋಷ ತಂದಿದೆ, 5 ಲಕ್ಷ ರೂ.ಗಳಿಗೂ ಮಿಕ್ಕಿ ಪುಸ್ತಕದ ವ್ಯಾಪಾರ–ವಹಿವಾಟು ನಡೆದಿರುವುದು ಜನತೆ ಪುಸ್ತಕದ ಬಗ್ಗೆ ಹೊಂದಿರುವ ಒಲವಿಗೆ ಸಾಕ್ಷಿ ಎಂದರು.

ಸಾಮಾನ್ಯ ಬಡ ಕುಟುಂಬದಿಂದ ಬಂದವರೇ ಸಂಘಟಿಸಿದ ಈ ಪುಸ್ತಕ ಮೇಳಕ್ಕೆ ಅನೇಕರು ಉದಾರವಾದ ಸಹಾಯ ಹಸ್ತ ಚಾಚಿದ್ದಾರೆ. ಅವರಿಗೆ ಮೇಳ ಚಿರ ಋಣಿಯಾಗಿದೆ. ಅನೇಕ ಸ್ವಯಂ ಪ್ರೇರಿತವಾಗಿ ಶ್ರಮಿಸಿದ ದೊಡ್ಡ ಪಡೆಯೇ ಇದೆ ಎಂದರು. ಅವರಿವರೆನ್ನದೆ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮೇ ಸಾಹಿತ್ಯ ಬಳಗದ ಪ್ರಮುಖರಾದ ಚೆನ್ನು ಕಟ್ಟಿಮನಿ, ಲಾಯಪ್ಪ ಇಂಗಳೆ, ಕಲ್ಲಪ್ಪ ಶಿವಶರಣ, ವೈ.ಎಸ್. ಗುಣಕಿ, ಸಾಯಬಣ್ಣ ಹಳ್ಳಿ, ಸೋಮಲಿಂಗ ರಣದೇವಿ, ಲಿಂಗರಾಜ್ ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE